ಸಂಪುಟ : 10 ಸಂಚಿಕೆ: 297 ಪುಟ : 4+2 ಬೆಲೆ: 3.00 ಶನಿವಾರ ಜನವರಿ 10 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 297 Pages : 4+2 Price : 3.00 Saturday January 10 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಯುವ ಸಂವಾದ, ಕವಿಗೋಷ್ಠಿ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜ. 10ರಂದು ಸಂಜೆ 6.30 ಗಂಟೆಗೆ ತೋಂಟ–ದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಸ್ವಾಮಿ ವಿವೇಕಾನಂದರ ಜನ್ಮದಿನ 'ಯುವ ದಿನಾಚರಣೆ' ಅಂಗವಾಗಿ ಯುವ ಸಂವಾದ ಹಾಗೂ ಯುವ ಕವಿಗೋಷ್ಠಿಯನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ವಹಿಸುವರು. ಯುವಜನ ಹಾಗೂ ಸಾಹಿತ್ಯಾಭಿರುಚಿ ಸಂವಾದಗೋಷ್ಠಿಯಲ್ಲಿ ಎಂ.ಎಸ್. ಹುಲ್ಲೂರ, ವೀರೇಶ ಹರ್ಲಾಪೂರ, ರಾಜೇಶ್ವರಿ ಬಡ್ನಿ, ಅನುಪ್ರಿಯಾ ಬಾಪುರಿ, ಅನ್ನಪೂರ್ಣ ಕಾಡಣ್ಣವರ, ಮೇಘಾ ಹಾದಿಮನಿ ಭಾಗವಹಿಸುವರು.

ಯುವ ಕವಿಗೋಷ್ಠಿಯಲ್ಲಿ ಡಾ. ಈರಣ್ಣ ಪೂಜಾರ, ಗಣೇಶ ಪಾಟೀಲ, ಅನ್ನಪೂರ್ಣ ಕುರಿ, ಲಕ್ಷ್ಮಿ ಪಾಟೀಲ, ಸಂತೋಷ ಚಿಜ್ಜೇರಿ, ಸಂಗೀತಾ ಜೋಗಿನ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ದಾವಣಗೆರೆ ಉಪಚುನಾವಣೆ ಮುಸ್ಲಿಂ ಸಮುದಾಯಕ್ಕೆ ಕಾಂಗ್ರೆಸ್ ಟಿಕೆಟ್ ನೀಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಮುಂಬರುವ ಎರಡು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ, ದಾವಣಗೆರೆ ಕ್ಷೇತ್ರದಿಂದ ಮುಸ್ಲಿಂ ಸಮುದಾಯದ ಅಭ್ಯರ್ಥಿಗೆ ಸ್ಪರ್ಧಿಸಲು ಅವಕಾಶ ನೀಡಬೇಕೆಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಕಾಂಗ್ರೆಸ್ ಹೈಕಮಾಂಡ್‌ನ್ನು ಒತ್ತಾಯಿಸಿದೆ. ಕೇಂದ್ರ ಕಚೇರಿಯಲ್ಲಿ ನಡೆದ ಪ್ರಮುಖ ಸಭೆಯಲ್ಲಿ ಮಾತನಾಡಿದ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ, ನಿಷ್ಠಾವಂತ ಬೆಂಬಲಕ್ಕೆ ಮಾನ್ಯತೆ ನೀಡಬೇಕು. ದಾವಣಗೆರೆ ಕ್ಷೇತ್ರದಲ್ಲಿ ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯವು ದಶಕಗಳಿಂದ ಕಾಂಗ್ರೆಸ್ ಪಕ್ಷವನ್ನು ಹಾಗೂ ದಿವಂಗತ ಶಾಮನೂರು ಶಿವಶಂಕರಪ್ಪನವರ ಕುಟುಂಬವನ್ನು ನಿಸ್ವಾರ್ಥವಾಗಿ ಬೆಂಬಲಿಸುತ್ತಾ ಬಂದಿದೆ. ಈ ನಿಷ್ಠೆಯನ್ನು ಪರಿಗಣಿಸಿ ಈ ಬಾರಿ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಬೇಕು. ದಾವಣಗೆರೆಯಲ್ಲಿ ಅಲ್ಪಸಂಖ್ಯಾತರ ಸಂಖ್ಯೆ ಗಣನೀಯವಾಗಿದ್ದು, ಇಲ್ಲಿನ ರಾಜಕೀಯ ನಿರ್ಧಾರಗಳಲ್ಲಿ ಸಮುದಾಯದ ಪಾತ್ರ ನಿರ್ಣಾಯಕವಾಗಿದೆ. ಹೀಗಾಗಿ, ಈ ಬಾರಿ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ನೀಡುವುದು ನ್ಯಾಯಸಮ್ಮತವಾಗಿದೆ. ಹೈಕಮಾಂಡ್ ಈ ಬಾರಿ ಮುಸ್ಲಿಂ ಸಮುದಾಯದ ಅಭ್ಯರ್ಥಿಗೆ ಅವಕಾಶ ಕಲ್ಪಿಸಿಕೊಡುತ್ತದೆ ಎಂಬ ವಿಶ್ವಾಸ ನಮಗಿದೆ ಎಂದರು.

ಈ ಸಂದರ್ಭದಲ್ಲಿ ಮಹಾಸಭಾದ ಪ್ರಮುಖ ಪದಾಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

### ಹೊನಲು ಬೆಳಕಿನ ಪ್ರೋ ಕಬಡ್ಡಿ ಪಂದ್ಯಾಟಕ್ಕೆ ಕ್ಷಣಗಣನೆ । ಬೆಂಗಳೂರು ಬುಲ್ಸ್ ಆಟಗಾರರು ರೋಣಕ್ಕೆ

# ಇಂದಿನಿಂದ ರೋಣದಲ್ಲಿ ಕಬಡ್ಡಿ ಗುಂಗು

■ವಿಜಯಸಾಕ್ಷಿ ಸುದ್ದಿ, ರೋಣ

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ (ಮಿಥುನ್) ಪಾಟೀಲರ ಜನ್ಮದಿನದ ನಿಮಿತ್ತ ಎಂಜಿಪಿ ಯುವ ಬ್ರಿಗೇಡ್ ಹಾಗೂ ಗದಗ ಜಿಲ್ಲಾ ಕಬಡ್ಡಿ ಅಮೆಚೂರ್ ಅಸೋಸಿಯೇಷನ್ ಆಶ್ರಯದಲ್ಲಿ ಹಮ್ಮಿಕೊಂಡಿರುವ ಪ್ರೋ ಕಬಡ್ಡಿ ವೈಭವಕ್ಕೆ ಕ್ಷಣಗಣನೆ ಆರಂಭವಾಗಿದೆ. ಜಕ್ಕಲಿ ರಸ್ತೆಯಲ್ಲಿರುವ ಸೇಲ್ಸ್ ಸೊಸೈಟಿ ಆವರಣದಲ್ಲಿ ಬೃಹತ್ ಕ್ರೀಡಾಂಗಣ ನಿರ್ಮಾಣ ಕಾರ್ಯಕ್ಕೆ ಅಂತಿಮ ಸ್ವರೂಪ ನಿಡಲಾಗುತ್ತಿದೆ.

ಯುವ ಮುಖಂಡ ಹಾಗೂ ರೋಣ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲರ 48ನೇ ಜನ್ಮದಿನದ ಅಂಗವಾಗಿ ರೋಣ ಪಟ್ಟಣದಲ್ಲಿ ಜ. 9ರಿಂದ 13ರವರೆಗೆ ಹಲವು ಸಮಾಜಮುಖಿ ಕಾರ್ಯಗಳನ್ನು ಅವರ ಅಭಿಮಾನಿ ಬಳಗದವರು ಹಮ್ಮಿಕೊಂಡಿದ್ದಾರೆ. ಐದು ದಿನಗಳ ಕಾಲ ನಡೆಯುವ ಕಾರ್ಯಕ್ರಮಗಳಲ್ಲಿ ಉಚಿತ ಆರೋಗ್ಯ ಶಿಬಿರ, ರಕ್ತದಾನ ಶಿಬಿರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರನ್ನು ಗೌರವಿಸುವ ಕಾರ್ಯಕ್ರಮ ಹಮ್ಮಿಕೊಂಡಿರುವುದು ವಿಶೇಷವಾಗಿದೆ.

ಜ. 10 ಸಂಜೆ 4ರಿಂದ ಆರಂಭಗೊಳ್ಳುವ ಪ್ರೋ ಕಬಡ್ಡಿ ಪಂದ್ಯಾಟದ ಹಿನ್ನೆಲೆಯಲ್ಲಿ ರೋಣ ಪಟ್ಟಣದ ಪ್ರಮುಖ ವೃತ್ತಗಳು ಅಲಂಕಾರಿಕ ಬ್ಯಾನರ್‌ಗಳಿಂದ ರಾರಾಜಿಸುತ್ತಿವೆ. ಜ. 10ರಂದು ಬೆಳಿಗ್ಗೆ 10ಕ್ಕೆ ಸಿದ್ಧಾರೂಢ ಮಠದಿಂದ ಆಕರ್ಷಕ ಟ್ರೋಫಿ ಮೆರವಣಿಗೆ ನಡೆಯಲಿದ್ದು, 5 ಸಾವಿರಕ್ಕೂ ಅಧಿಕ ಕ್ರೀಡಾ ಪ್ರೇಮಿಗಳು ಭಾಗವಹಿಸುವ ನಿರೀಕ್ಷೆ ಸಂಘಟಕರದ್ದು. ಬೆಂಗಳೂರು ಬುಲ್ಸ್ ತಂಡದ ಆಟಗಾರ ಗಣೇಶ ಹನ್ಮಂತಗೌಡ ಆಗಮಿಸಲಿದ್ದು, ಪ್ರೋ ಕಬಡ್ಡಿಗೆ ಮತ್ತಷ್ಟು ರಂಗು ನೀಡಿದೆ.



ಪ್ರೋ ಕಬಡ್ಡಿ ಪಂದ್ಯಾವಳಿಗಳಲ್ಲಿ 10 ಪುರುಷ ತಂಡಗಳು ಮತ್ತು ಆಹ್ವಾನಿತ 4 ಮಹಿಳಾ ತಂಡಗಳು ಭಾಗವಹಿಸಲಿವೆ. ಜ. 13ರವರೆಗೆ ನಡೆಯಲಿರುವ ಕಬಡ್ಡಿ ಪಂದ್ಯಾವಳಿಯಲ್ಲಿ ಒಂದು ತಂಡ 9 ತಂಡಗಳೊಂದಿಗೆ ಸೆಣಸಾಟ ನಡೆಸಲಿದ್ದು, ಕಬಡ್ಡಿ ಪ್ರಿಯರ ಮನಸ್ಸನ್ನು ತಣಿಸಲಿದೆ. ಆಹ್ವಾನಿತ ಮಹಿಳಾ ಕಬಡ್ಡಿ ತಂಡಗಳು ಪಾಲ್ಗೊಳ್ಳಲಿದ್ದು, ಮಹಿಳಾ ಕಬಡ್ಡಿ ಪಂದ್ಯಾವಳಿಗಳನ್ನು ವೀಕ್ಷಿಸಲು ಮಹಿಳೆಯರಿಗೂ ಆದ್ಯತೆ ನೀಡಲಾಗಿದೆ. ಜ. 13ರಂದು ಸಮಾರೋಪ ಸಮಾರಂಭ ಜರುಗಲಿದ್ದು, ಅಂದು ಬೆಂಗಳೂರು ಬುಲ್ಸ್ ತಂಡದ ಇನ್ನೋರ್ವ ಆಟಗಾರ ಸತ್ಯಪ್ಪ ಮಟ್ಟಿ ಭಾಗವಹಿಸಿ, ಅಂತಿಮ ರೋಚಕ ಪಂದ್ಯಕ್ಕೆ ಕಾರಣರಾಗಲಿದ್ದಾರೆ. ಒಟ್ಟಿನಲ್ಲಿ ರೋಣ ಪಟ್ಟಣ ಸೇರಿ ಗ್ರಾಮೀಣ ಭಾಗಗಳಲ್ಲಿಯೂ ಕಬಡ್ಡಿ ಪಂದ್ಯಾಟದ ಮಾತು ಕೇಳಿಬರುತ್ತಿದೆ.

> ಪ್ರೋ ಕಬಡ್ಡಿ ಪಂದ್ಯಾವಳಿಗಳಲ್ಲಿ 10 ಪುರುಷ ತಂಡಗಳು ಹಾಗೂ ಆಹ್ವಾನಿತ 4 ಮಹಿಳಾ ತಂಡಗಳು ಭಾಗವಹಿಸಲಿವೆ. ಜ. 10ರಂದು ಬೆಂಗಳೂರು ಬುಲ್ಸ್ ತಂಡದ ಆಟಗಾರ ಗಣೇಶ ಹನ್ಮಂತಗೌಡ, ಜ. 13ರಂದು ಬೆಂಗಳೂರು ಬುಲ್ಸ್ ತಂಡದ ಇನ್ನೋರ್ವ ಆಟಗಾರ ಸತ್ಯಪ್ಪ ಮಟ್ಟಿ ಭಾಗಿಯಾಗಲಿದ್ದಾರೆ.
>
> **– ಬಸವರಾಜ ಹೊಸಳ್ಳಿ.**
> ಕಬಡ್ಡಿ ತರಬೇತುದಾರ.

> ಅಪ್ಪಟ ದೇಸೀ ಕ್ರೀಡೆಯಾಗಿರುವ ಕಬಡ್ಡಿಗೆ ಮಹತ್ವ ನೀಡಿರುವುದು ಒಳ್ಳೆಯ ಬೆಳವಣಿಗೆ. ಕಾರಣ ನಮ್ಮ ಯುವಕರು ಇಂದು ದೇಸೀ ಕ್ರೀಡೆಗಳನ್ನು ಮರೆತು ವಿದೇಶಿ ಕ್ರೀಡೆಗಳ ಬಗ್ಗೆ ಹೆಚ್ಚು ಗಮನಹರಿಸುತ್ತಾರೆ. ಹೀಗಾಗಿ, ನಮ್ಮ ದೇಸೀ ಕ್ರೀಡೆ ಕಬಡ್ಡಿ ನೇಪಥ್ಯಕ್ಕೆ ಸರಿದಿತ್ತು. ಈಗ ಮತ್ತೆ ಕಬಡ್ಡಿ ವೈಭವ ಮರಳುತ್ತಿರುವುದು ಸ್ವಾಗತಾರ್ಹವಾಗಿದೆ.
>
> **– ಅಂದಪ್ಪ ಬಿಚ್ಚೂರ.**
> ತಾ.ಪಂ ಮಾಜಿ ಸದಸ್ಯರು, ನಿಡಗುಂದಿ.

### ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಬಿ.ಬಿ. ಅಸೂಟಿ

# ಯೋಜನೆಗಳ ಅನುಷ್ಠಾನಕ್ಕಾಗಿ ಆಸಕ್ತಿಯಿಂದ ಕೆಲಸ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವುದೇ ಪಂಚ ಗ್ಯಾರಂಟಿ ಯೋಜನೆಗಳ ಉದ್ದೇಶವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ತಿಳಿಸಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳು ಬಡಜನರ ಸೇವೆಗೆ ಒದಗಿಸಿದ ಬಹುದೊಡ್ಡ ಅವಕಾಶವಾಗಿದೆ. ಪಂಚ ಗ್ಯಾರಂಟಿ ಯೋಜನೆಯ ಮಹತ್ವವನ್ನು ಅರ್ಥೈಸಿಕೊಂಡು ಅವುಗಳ ಸಂಪೂರ್ಣ ಅನುಷ್ಠಾನಕ್ಕಾಗಿ ಸಂಬಂಧಿತ ಅಧಿಕಾರಿಗಳು ಆಸಕ್ತಿಯಿಂದ ಕೆಲಸ ನಿರ್ವಹಿಸಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ತಲುಪಿಸುವಲ್ಲಿ ವಿಳಂಬವಾಗಬಾರದು. ಸಾರ್ವಜನಿಕರ ಸುರಕ್ಷತೆಗಾಗಿ ಗದಗ ಹೊಸ ಬಸ್ ನಿಲ್ದಾಣದಲ್ಲಿ ಸಿ.ಸಿ ಕ್ಯಾಮರಾ ಅಳವಡಿಸಲಾಗಿದ್ದು, ಅವುಗಳು ವ್ಯವಸ್ಥಿತವಾಗಿರುವ ಕುರಿತು ತಪಾಸಣೆ ನಡೆಸಬೇಕು ಎಂದು ತಿಳಿಸಿದರು.

ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಬಡಜನರ ಹಸಿವು ನೀಗಿಸುವಲ್ಲಿ ಅನ್ನಭಾಗ್ಯ ಯೋಜನೆಯ ಪಾತ್ರ ಮಹತ್ವದ್ದಾಗಿದೆ. ಅನ್ನಭಾಗ್ಯ ಯೋಜನೆಯ ಅಕ್ಕಿಯು ಕಳ್ಳಸಂತೆಯಲ್ಲಿ ಮಾರಾಟವಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.




ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಬಿ. ಅಳಗವಾಡಿ ಮಾತನಾಡಿ, ಪಡಿತರ ಅಂಗಡಿಯಲ್ಲಿ ಅನ್ನಭಾಗ್ಯ ಯೋಜನೆಯ ಅಕ್ಕಿ ಸಮರ್ಪಕ ರೀತಿಯಲ್ಲಿ ಅರ್ಹ ಫಲಾನುಭವಿಗಳಿಗೆ ವಿತರಣೆಯಾಗುತ್ತಿರುವ ಕುರಿತು ಸಂಬಂಧಿತ ಇಲಾಖೆಯ ಅಧಿಕಾರಿಗಳು ತಪಾಸಣೆ ನಡೆಸಬೇಕು ಎಂದರು.

ಪಂಚಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ಒದಗಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ ಡಿಸೆಂಬರ್ 2025ರವರೆಗೆ 249353 ನೋಂದಣಿಯಾದ ಅರ್ಜಿಗಳ ಪೈಕಿ 249353 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ವಾಕರಸಾ ಸಂಸ್ಥೆಯಿಂದ 11–6–2023ರಿಂದ 4–1–2026ರವರೆಗೆ 13.75 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಅನ್ನಭಾಗ್ಯ ಯೋಜನೆಯಡಿ ಫೆಬ್ರುವರಿ 2025ರಿಂದ ಡಿಸೆಂಬರ್ 2025ರವರೆಗೆ ಹೆಚ್ಚುವರಿ 5 ಕೆಜಿ ಆಹಾರ ಧಾನ್ಯಗಳ ಹಂಚಿಕೆಯಡಿ ಜಿಲ್ಲೆಯಲ್ಲಿ 4,33,927 ಕ್ವಿಂಟಾಲ್ ಅಕ್ಕಿ ಹಂಚಿಕೆಯಾಗಿದೆ.

ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಜನವರಿ 2024ರಿಂದ ಸೆಪ್ಟೆಂಬರ್ 2025ರವರೆಗೆ 6356 ಅರ್ಜಿಗಳು ಸ್ವೀಕೃತವಾಗಿರುತ್ತವೆ. ಆ ಪೈಕಿ 4048 ಅರ್ಹ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆಯಾಗಿರುತ್ತದೆ. ಬಾಕಿ ಉಳಿದಿರುವ 2308 ಅಭ್ಯರ್ಥಿಗಳು ಯುವನಿಧಿ ಯೋಜನೆಯ ಷರತ್ತುಗಳಿಗೆ ಹಂತ ಹಂತವಾಗಿ ಅರ್ಹರಾಗುತ್ತಾರೆ. ಗೃಹ ಜ್ಯೋತಿ ಯೋಜನೆಯಡಿ ಒಟ್ಟು 278395 ಸ್ಥಾವರಗಳ ಪೈಕಿ 274242 ಸ್ಥಾವರಗಳು ನೋಂದಣಿಯಾಗಿವೆ.

ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿ.ಪಂ ಯೋಜನಾ ನಿರ್ದೇಶಕ ಎಂ.ಎಸ್. ಚಳಗೇರಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಫಕ್ರುಸಾಬ ಚಿಕ್ಕಮಣ್ಣೂರ, ಸದಸ್ಯರುಗಳಾದ ಶರಣಪ್ಪ ಬೆಟಗೇರಿ, ಶರೀಫ್ ಬಿಳಿಯಲಿ, ನಾಗರಾಜ ಶಿವಪ್ಪ ಮಡಿವಾಳರ, ವಿವೇಕ ಯಾವಗಲ್, ದೇವಪ್ಪ ಮೋರನಾಳ, ಪುಲಕೇಶಗೌಡ ಪಾಟೀಲ, ಈಶಣ್ಣ ಹುಣಸೀಕಟ್ಟಿ, ಗೀತಾ ಸುರೇಶ ಬೀರಣ್ಣವರ, ವೀರಯ್ಯ ಮಠಪತಿ, ಆರ್.ಆರ್. ಗಡ್ಡದ್ದೇವರಮಠ, ಗ್ಯಾರಂಟಿ ಯೋಜನೆಗೆ ಸಂಬಂಧಿತ ಇಲಾಖಾ ಅಧಿಕಾರಿಗಳು ಹಾಜರಿದ್ದರು.

> ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಜಿಲ್ಲೆಯ ಬಸ್ ನಿಲ್ದಾಣಗಳಲ್ಲಿ ಮಹಿಳೆಯರಿಗೆ ಆಸನದ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಬಸ್ ನಿಲ್ದಾಣಗಳ ಸ್ವಚ್ಛತೆ ಮುಖ್ಯವಾಗಿದ್ದು, ಬಸ್ ನಿಲ್ದಾಣದ ಆವರಣ ಸ್ವಚ್ಛವಾಗಿರುವಂತೆ ಹಾಗೂ ಅಲ್ಲಿ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು ಎಂದರು.

# ಜಿಲ್ಲಾಮಟ್ಟದ ರಸಪ್ರಶ್ನೆ ಸ್ಪರ್ಧೆ



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಜಗತ್ತಿನ ಅರಿವು ಮೂಡಿಸುವ ಉದ್ದೇಶದಿಂದ ಜಿ.ಎನ್.ಟಿ.ಟಿ.ಎಫ್ ಹಾಗೂ ಎಚ್.ಕೆ. ಪಾಟೀಲ ಪ್ರತಿಷ್ಠಾನದ ಸಹಯೋಗದಲ್ಲಿ ಜಿಲ್ಲೆಯ 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ರಸಪ್ರಶ್ನೆ ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಕೃಷ್ಣಗೌಡ ಪಾಟೀಲ ತಿಳಿಸಿದರು.

ನಗರದ ಜಿ.ಎನ್.ಟಿ.ಟಿ.ಎಫ್ ಕಚೇರಿಯಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜಮುಖಿ ಕಾರ್ಯಗಳ ಭಾಗವಾಗಿ ಶಿಕ್ಷಣ ಕ್ಷೇತ್ರಕ್ಕೆ ಒತ್ತು ನೀಡಲಾಗುತ್ತಿದೆ. ಜಿಲ್ಲೆಯ 138 ಪ್ರೌಢಶಾಲೆಗಳ ಸುಮಾರು 13,500 ವಿದ್ಯಾರ್ಥಿಗಳನ್ನು ಈ ಸ್ಪರ್ಧೆಯು ತಲುಪಲಿದೆ ಎಂದರು.

ವಿವಿಧ ಹಂತಗಳಲ್ಲಿ ನಡೆಯುವ ಈ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಆಕರ್ಷಕ ನಗದು ಬಹುಮಾನ ನೀಡಲಾಗುವುದು. ಪ್ರಥಮ ಬಹುಮಾನ 5 ಸಾವಿರ ರೂ, ದ್ವಿತೀಯ 3 ಸಾವಿರ ರೂ, ತೃತೀಯ ಬಹುಮಾನ 2 ಸಾವಿರ ರೂ ನಿಗದಿಪಡಿಸಲಾಗಿದೆ. ಬೆಳಗಾವಿಯ ವಿನೋದ ದೇಶಪಾಂಡೆ ನೇತೃತ್ವದ ತಜ್ಞರ ತಂಡವು ಸ್ಪರ್ಧೆಯನ್ನು ವ್ಯವಸ್ಥಿತವಾಗಿ ನಡೆಸಿಕೊಡಲಿದೆ ಎಂದು ತಿಳಿಸಿದರು.

ಹಿರಿಯ ಲೆಕ್ಕ ಪರಿಶೋಧಕ ಆನಂದ ಪೊತ್ನಿಸ್ ಮಾತನಾಡಿ, ಜ. 17 ಮತ್ತು ಜ. 24ರಂದು ಜಿ.ಎನ್.ಟಿ.ಟಿ.ಎಫ್ ಆವರಣದಲ್ಲಿ ಸ್ಪರ್ಧೆಗಳು ನಡೆಯಲಿವೆ. ದೂರದ ಊರುಗಳಿಂದ ಬರುವ ವಿದ್ಯಾರ್ಥಿಗಳಿಗೆ ಮತ್ತು ಅವರ ಪಾಲಕರಿಗೆ ಅನುಕೂಲವಾಗುವಂತೆ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಅಲ್ಲದೆ, ಪಾಲ್ಗೊಳ್ಳುವ ಎಲ್ಲರಿಗೂ ಉಪಾಹಾರ ಮತ್ತು ಲಘು ಉಪಾಹಾರದ ವ್ಯವಸ್ಥೆ ಮಾಡಲಾಗಿದೆ ಎಂದರು.

ಇಂದಿನ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಇಂತಹ ರಸಪ್ರಶ್ನೆಗಳು ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಲಿವೆ. ಆದ್ದರಿಂದ ಜಿಲ್ಲೆಯ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಂಘಟಕರು ಮನವಿ ಮಾಡಿದರು.

# ಖರೀದಿ ಕೇಂದ್ರದಲ್ಲಿ ರೈತರಿಗೆ ಅನ್ಯಾಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್)ದಿಂದ ನಡೆಯುತ್ತಿರುವ ಮೆಕ್ಕೆಜೋಳ ಖರೀದಿ ಕೇಂದ್ರದಲ್ಲಿ ಪ್ರಾಮಾಣಿಕ ರೈತರಿಗೆ ಅನ್ಯಾಯವಾಗುತ್ತಿದೆ ಎಂದು ಸಂಘದ ಸದಸ್ಯ, ಪಕ್ಷಾತೀತ ರೈತಪರ ಹೋರಾಟ ವೇದಿಕೆ ತಾಲೂಕಾಧ್ಯಕ್ಷ ಮಹೇಶ ಹೊಗೆಸೊಪ್ಪಿನ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರೈತರ ಹೋರಾಟದ ಫಲವಾಗಿ ರಾಜ್ಯದಲ್ಲಿಯೇ ಪ್ರಥಮವಾಗಿ ಆರಂಭಗೊಂಡ ಟಿಎಪಿಸಿಎಂಎಸ್‌ನ ಖರೀದಿ ಕೇಂದ್ರದಲ್ಲಿ ಮೆಕ್ಕೆಜೋಳ ಮಾರಾಟಕ್ಕಾಗಿ ನೋಂದಣಿ ಮಾಡಿಸಿದ ರೈತರಿಗೆ ಒಂದು ತಿಂಗಳಾದರೂ ಮಾರಾಟಕ್ಕೆ ಅವಕಾಶ ಸಿಗುತ್ತಿಲ್ಲ. ತಡವಾಗಿ ನೋಂದಣಿ ಮಾಡಿಸಿದ ಕೆಲ ಪ್ರಭಾವಿ ರೈತರು ಈಗಾಗಲೇ ಮಾರಾಟ ಮಾಡಿದ್ದಾರೆ.

ಮಾರಾಟ ಮಹಾಮಂಡಳದ ಅಧಿಕಾರಿಗಳ ಸೂಚನೆಯಂತೆ ಕೆಲ ರೈತರ ಮೆಕ್ಕೆಜೋಳ ಖರೀಸಿದ್ದೇವೆ ಮತ್ತು ಸರದಿಯಲ್ಲಿದ್ದ ರೈತರು ಬಂದಿಲ್ಲ ಎಂದು ಹಾರಿಕೆ ಉತ್ತರ ನೀಡುತ್ತಿದ್ದಾರೆ.



ಈ ಬಗ್ಗೆ ರೈತ ಸಂಘಟನೆಯವರು ಮಾಡುತ್ತಿರುವ ಕೆಲ ಆರೋಪಗಳನ್ನು ಅಲ್ಲಗಳೆಯುವಂತಿಲ್ಲ. ಈ ಬಗ್ಗೆ ತನಿಖೆಯಾಗಬೇಕು. ಅಲ್ಲದೇ ಈಗಾಗಲೇ ಕಡಿಮೆ ದರಕ್ಕೆ ಮೆಕ್ಕೆಜೋಳ ಮಾರಾಟ ಮಾಡಿದ ಎಲ್ಲ ರೈತರಿಗೂ ಸರ್ಕಾರದ 250 ರೂ ಸಹಾಯಧನ ಸಿಗುವಂತಾಗಬೇಕು.

ಬೆಂಬಲ ಬೆಲೆಯಡಿ ಮೆಕ್ಕೆಜೋಳ ಮಾರಾಟ ಮಾಡಿ 1 ತಿಂಗಳಾಗಿದ್ದು, ಕೂಡಲೇ ರೈತರ ಖಾತೆಗೆ ಹಣ ಜಮೆಯಾಗಬೇಕು ಎಂದು ಅವರು ಒತ್ತಾಯಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ಪೂರ್ವಭಾವಿ–1 ವಿಜ್ಞಾನ ವಿಷಯದ ಪರೀಕ್ಷಾ ಸ್ಥಳಕ್ಕೆ ಜಿಲ್ಲಾಧಿಕಾರಿ ಭೇಟಿ

# ವಿದ್ಯಾರ್ಥಿಗಳು ಗುಣಾತ್ಮಕ ಫಲಿತಾಂಶದೊಂದಿಗೆ ಯಶಸ್ಸು ಗಳಿಸಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್ ಅವರು ಶುಕ್ರವಾರ ಲಕ್ಕುಂಡಿಯ ಬಾಲಕಿಯರ ಸರ್ಕಾರಿ ಪ್ರೌಢಶಾಲೆ ಹಾಗೂ ಬಿ.ಎಚ್. ಪಾಟೀಲ ಪ್ರೌಢಶಾಲೆಯಲ್ಲಿ ನಡೆಯುತ್ತಿರುವ ಎಸ್‌ಎಸ್‌ಎಲ್‌ಸಿ ಪೂರ್ವಭಾವಿ–1 ವಿಜ್ಞಾನ ವಿಷಯದ ಪರೀಕ್ಷಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಈಗಾಗಲೇ ಶಾಲಾ ಶಿಕ್ಷಣ ಇಲಾಖೆ ನೀಡಿರುವ ಮಾರ್ಗದರ್ಶನದಂತೆ ತಾವೆಲ್ಲ ವಿದ್ಯಾರ್ಥಿಗಳ ಸಾಮರ್ಥ್ಯ ಹೆಚ್ಚಿಸಲು ವಿದ್ಯಾರ್ಥಿವಾರು ಟ್ರ್ಯಾಕಿಂಗ್ ವ್ಯವಸ್ಥೆ ಅಡಿಯಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯ ಕಲಿಕಾ ಮಟ್ಟವನ್ನು ನಿಖರವಾಗಿ ಗುರುತಿಸಿ, ಪರೀಕ್ಷೆಗಳ ಆಧಾರದ ಮೇಲೆ ನಿರಂತರವಾಗಿ ಟ್ರಾಕಿಂಗ್ ನಡೆಸಬೇಕು. ವಿದ್ಯಾರ್ಥಿಗಳನ್ನು ಸಾಮರ್ಥ್ಯಾನುಸಾರ ಗುಂಪು ಮಾಡಿ, ಅಗತ್ಯ ಕ್ರಮ ಕೈಗೊಂಡು ಮೌಲ್ಯಮಾಪನ ಮಾಡಿ ಪೋಷಕರ ಸಭೆಯಲ್ಲಿ ಮಕ್ಕಳಿಗೆ ಹಾಗೂ ಪೋಷಕರಿಗೆ ತಿಳಿಸಿ, ಗಮನಿಸಿದ ತಪ್ಪನ್ನು ಸರಿಪಡಿಸಿ. ಮುಂದಿನ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸುವಲ್ಲಿ ಸತತ ಪ್ರಯತ್ನ ನಿಮ್ಮದಾಗಿರಲಿ ಎಂದರು.




> ನಮ್ಮೆಲ್ಲರ ಪ್ರಯತ್ನ ಕೇವಲ ಮಕ್ಕಳ ಉತ್ತೀರ್ಣತೆಗಷ್ಟೇ ಸೀಮಿತವಾಗದೆ, ಎಲ್ಲ ವಿದ್ಯಾರ್ಥಿಗಳು ಗುಣಾತ್ಮಕ ಕಲಿಕೆಯನ್ನು ಹೊಂದುವಂತೆ ಪ್ರಯತ್ನಿಸೋಣ. ಸರ್ಕಾರದಿಂದ ನೀಡಿದ 29 ಅಂಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಜಿಲ್ಲೆಯ ಫಲಿತಾಂಶವನ್ನು ಶೇ. 100ಕ್ಕೆ ತಲುಪಿಸುವಂತೆ ಎಲ್ಲರೂ ಬದ್ಧತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಓದು–ಬರಹದಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಗುರುತಿಸಿ, ಪ್ರತಿದಿನ ನಿಗದಿತ ಸಮಯದಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಜಾರಿಗೆ ತರಬೇಕು. ನಿಧಾನ ಕಲಿಕೆಯ ಹಾಗೂ NC ವಿದ್ಯಾರ್ಥಿಗಳಿಗೆ, ವಿಶೇಷ ಗಮನ ಹರಿಸಿ ಇಲಾಖೆ ನೀಡಿದ ತರಬೇತಿ ಹಾಗೂ ಮಾರ್ಗದಶನದಂತೆ ಕನಿಷ್ಠ 40+ ಅಂಕ ಗಳಿಸುವಂತೆ ವಿಶೇಷ ತರಗತಿಗಳು, ಪುನರಾವಲೋಕನ, ಗುಂಪು ಚಟುವಟಿಕೆ ಹಾಗೂ ಮೇಧಾವಿ ವಿದ್ಯಾರ್ಥಿಗಳಿಗೆ ಅಪ್ಲೈಡ್ ಪ್ರಶ್ನೆಗಳ ಅಭ್ಯಾಸಕ್ಕೆ ಒತ್ತು ನೀಡುವಂತೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್.ಎಸ್. ಬುರಡಿ, ಎಪಿಸಿಓ ಎಸ್.ಎಸ್. ಕುರಿಯವರ, ತಾಂತ್ರಿಕ ಸಹಾಯಕ ಎಂ.ಎಚ್. ಸವದತ್ತಿ ಹಾಗೂ ಎರಡೂ ಶಾಲೆಯ ಮುಖ್ಯೋಪಾಧ್ಯಾಯರು ಉಪಸ್ಥಿತರಿದ್ದರು.

ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ

# ಮಧ್ಯವರ್ತಿಗಳಿಗೆ ಹಣ ನೀಡದಿರಿ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನಲ್ಲಿ ಹೊಸ ಪಡಿತರ ಚೀಟಿ ಪಡೆಯಲು ಕಾಯುತ್ತಿರುವ ಅರ್ಜಿದಾರರಿಗೆ ಪಂಚನಾಮೆ ಪ್ರಕ್ರಿಯೆ ಆರಂಭವಾಗಿದ್ದು, ಈ ಸಂದರ್ಭದಲ್ಲಿ ಸಾರ್ವಜನಿಕರು ಯಾವುದೇ ಮಧ್ಯವರ್ತಿಗಳಿಗೆ ಹಣ ನೀಡಿ ಮೋಸ ಹೋಗಬಾರದು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2017ರಿಂದ 2025ರ ಅವಧಿಯಲ್ಲಿ ಹೊಸ ಪಡಿತರ ಚೀಟಿಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಾಗರಿಕರ ಮನೆಗೆ ಆಹಾರ ಮತ್ತು ನಾಗರಿಕ ಸರಬರಾಜು – ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭೇಟಿ ನೀಡುತ್ತಿದ್ದಾರೆ. ಅರ್ಜಿದಾರರ ವಾಸಸ್ಥಳದ ಪರಿಶೀಲನೆ, ವಿಚಾರಣೆ ಹಾಗೂ ಪಂಚನಾಮೆ ನಡೆಸಿ, ಫಲಾನುಭವಿಗಳ ಭಾವಚಿತ್ರ ಮತ್ತು ಅಗತ್ಯ ಮಾಹಿತಿಯನ್ನು ಸ್ಥಳದಲ್ಲೇ ಸಂಗ್ರಹಿಸಲಾಗುತ್ತಿದೆ. ಇದು ಸರಕಾರದ ಅಧಿಕೃತ ಪ್ರಕ್ರಿಯೆಯಾಗಿದೆ.

ಪಡಿತರ ಚೀಟಿ ಮಂಜೂರು ಮಾಡಿಸಿಕೊಡುವುದಾಗಿ ನಂಬಿಸಿ ತಾಲೂಕಿನ ಕೆಲವು ಮಧ್ಯವರ್ತಿಗಳು, ದಲ್ಲಾಳಿಗಳು ಹಾಗೂ ಆನ್‌ಲೈನ್ ಅಂಗಡಿಯವರು ಫಲಾನುಭವಿಗಳಿಂದ 5 ಸಾವಿರ ರೂ.ದಿಂದ 7,500 ರೂಪಾಯಿವರೆಗೆ ಹಣಕ್ಕೆ ಬೇಡಿಕೆ ಇಡುತ್ತಿರುವುದು ಕಂಡುಬಂದಿದೆ. ಪಡಿತರ ಚೀಟಿ ಪಡೆಯುವುದು ನಾಗರಿಕರ ಹಕ್ಕು. ಇದಕ್ಕಾಗಿ ಯಾರಿಗೂ ಹಣ ನೀಡುವ ಅಗತ್ಯವಿಲ್ಲ ಎಂದು ಅಶೋಕ ಮಂದಾಲಿ ಸ್ಪಷ್ಟಪಡಿಸಿದ್ದಾರೆ.

ಒಂದು ವೇಳೆ ಯಾರಾದರೂ ಹಣದ ಬೇಡಿಕೆ ಇಟ್ಟಲ್ಲಿ ಸಾರ್ವಜನಿಕರು ಭಯಪಡದೆ ದೂರು ನೀಡಬಹುದು. ಗದಗ ನಗರದ ಮುಳಗುಂದ ನಾಕಾ ಬಳಿಯ ಕೆ.ಎಸ್.ಆರ್.ಟಿ.ಸಿ ಡಿಪೊ ಎದುರಿಗೆ ಇರುವ ಉಪವಿಭಾಗಾಧಿಕಾರಿ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿಯನ್ನು ಇಲ್ಲವೇ ಮೊಬೈಲ್ ಸಂಖ್ಯೆ–9449446313 ಸಂಪರ್ಕಿಸಿ ದೂರು ಸಲ್ಲಿಸುವಂತೆ ಅಶೋಕ ಮಂದಾಲಿ ತಿಳಿಸಿದ್ದಾರೆ.

# ಮಾಧ್ಯಮ ಅಕಾಡೆಮಿ ದತ್ತಿ ಪ್ರಶಸ್ತಿಗೆ ಪತ್ರಕರ್ತ ನಾಗರಾಜ್ ವೈ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕರ್ನಾಟಕ ಮಾಧ್ಯಮ ಅಕಾಡೆಮಿಯ 2025ನೇ ಸಾಲಿನ ವಿವಿಧ ದತ್ತಿನಿಧಿ ಪ್ರಶಸ್ತಿಗಳ ಪೈಕಿ 'ಪ್ರಜಾ ಸಂದೇಶ ದತ್ತಿ ಪ್ರಶಸ್ತಿ'ಗೆ ಟಿವಿ 5 ವಾಹಿನಿ ಕೊಪ್ಪಳ ಜಿಲ್ಲಾ ವರದಿಗಾರ ನಾಗರಾಜ್ ವೈ ಆಯ್ಕೆಯಾಗಿದ್ದಾರೆ.

ಬೆಂಗಳೂರಿನ ಮಾಧ್ಯಮ ಅಕಾಡೆಮಿ ಕಚೇರಿಯಲ್ಲಿ ಅಕಾಡೆಮಿಯ ಅಧ್ಯಕ್ಷರಾದ ಆಯೇಶಾ ಖಾನಂ ಅವರ ಅಧ್ಯಕ್ಷತೆಯಲ್ಲಿ ನಡೆದ ಮಾಧ್ಯಮ ಅಕಾಡೆಮಿಯ ವಾರ್ಷಿಕ ಪ್ರಶಸ್ತಿ ಹಾಗೂ ವಿವಿಧ ದತ್ತಿ ಪ್ರಶಸ್ತಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಪ್ರಜಾ ಸಂದೇಶ ದತ್ತಿ ಪ್ರಶಸ್ತಿಗೆ ನಾಗರಾಜ್ ಅವರನ್ನು ಆಯ್ಕೆ ಮಾಡಲಾಗಿದೆ. ಕಳೆದ ಹಲವು ವರ್ಷಗಳಿಂದ ದೃಶ್ಯ ಹಾಗೂ ಮುದ್ರಣ ಮಾಧ್ಯಮದಲ್ಲಿ ಸೇವೆ ಸಲ್ಲಿಸುತ್ತಿರುವ ಇವರು, ಕೊಪ್ಪಳ ತಾಲೂಕಿನ ಚಿಲಕಮುಖಿ ಗ್ರಾಮದಲ್ಲಿ ಯುವಕನೊಬ್ಬ ಅನ್ಯಜಾತಿ ಯುವತಿಯನ್ನು ಮದುವೆಯಾಗಿರುವ ಕಾರಣಕ್ಕೆ 8 ವರ್ಷಗಳ ಕಾಲ ಬಹಿಷ್ಕಾರ ಹಾಕಿದ ಘಟನೆ ಬಗ್ಗೆ ಟಿವಿ 5 ವಾಹಿನಿಯಲ್ಲಿ ವಿಶೇಷ ವರದಿ ಮಾಡಿದ್ದರು. ಕೊಪ್ಪಳ ಜಿಲ್ಲೆಯ ಪತ್ರಕರ್ತ ಬಳಗ ಹರ್ಷ ವ್ಯಕ್ತಪಡಿಸಿದ್ದು, ಅರ್ಹ ಪತ್ರಕರ್ತನಿಗೆ ಪ್ರಶಸ್ತಿ ದೊರಕಲು ಕಾರಣರಾದ ಮಾಧ್ಯಮ ಅಕಾಡೆಮಿ ಅಧ್ಯಕ್ಷರಿಗೂ, ಮಾಧ್ಯಮ ಅಕಾಡೆಮಿ ಸದಸ್ಯರು, ಕೊಪ್ಪಳದ ಹಿರಿಯ ಪತ್ರಕರ್ತರಾದ ನಿಂಗಜ್ಜ ಅವರಿಗೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರು ಹಾಗೂ ಅಕಾಡೆಮಿ ಸದಸ್ಯರಾದ ಶಿವಾನಂದ ತಗಡೂರು ಅವರಿಗೆ ಕೊಪ್ಪಳ ಜಿಲ್ಲೆಯ ಪತ್ರಕರ್ತರು ಅಭಿನಂದನೆ ತಿಳಿಸಿದ್ದಾರೆ. ಪ್ರಶಸ್ತಿಯು ಸಾಮಾಜಿಕವಾಗಿ ಹೆಚ್ಚಿನ ಜವಾಬ್ದಾರಿ ನೀಡಿದೆ. ನಾನು ಮಾಡಿದ ವರದಿ ಪರಿಗಣಿಸಿ ಪ್ರಶಸ್ತಿ ನೀಡಿದ್ದಕ್ಕೆ ಸರ್ಕಾರಕ್ಕೆ ಹಾಗೂ ಮಾಧ್ಯಮ ಅಕಾಡಮಿಗೆ ನಾನು ಸದಾ ಚಿರಋಣಿಯಾಗಿದ್ದೇನೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಅರ್ಹರನ್ನು ಗುರುತಿಸುತ್ತಿರುವ ಅಕಾಡೆಮಿ ಸದಸ್ಯರು, ಹಿರಿಯ ಪತ್ರಕರ್ತ ಕೆ.ನಿಂಗಜ್ಜ, ಮಾಧ್ಯಮ ಅಕಾಡೆಮಿ ಸದಸ್ಯರಾದ ಶಿವಾನಂದ ತಗಡೂರು, ಅಕಾಡೆಮಿಯ ಅಧ್ಯಕ್ಷರಾದ ಆಯೇಶಾ ಖಾನಂ, ಕಾರ್ಯದರ್ಶಿ ಸಹನಾ ಎಂ ಸೇರಿದಂತೆ ಅಕಾಡೆಮಿಯ ಎಲ್ಲಾ ಸದಸ್ಯರಿಗೆ ನಾಗರಾಜ್. ವೈ ಧನ್ಯವಾದಗಳನ್ನು ತಿಳಿಸಿದ್ದಾರೆ.

ಜ.10ರಂದು ಶಿರಸಂಗಿ ಲಿಂಗರಾಜರ 165ನೇ ಜನ್ಮದಿನಾಚರಣೆ ನಿಮಿತ್ತ ಲೇಖನ

# ದಾನಶೂರ ಶಿರಸಂಗಿ ಲಿಂಗರಾಜರು

'ಶಿಕ್ಷಣ ಸೇವೆಯೇ ದೇವರ ಸೇವೆ' ಎಂಬ ಅಚಲವಾದ ನಂಬಿಕೆಯಿಂದ ಶಿಕ್ಷಣ ಸಂಸ್ಥೆ ಸ್ಥಾಪಿಸಲು ನಿಸ್ವಾರ್ಥ ಮನೋಭಾವನೆಯಿಂದ ಸಂಸ್ಥಾನದ ಇಡೀ ಆಸ್ತಿಯನ್ನೇ ಸಮರ್ಪಿಸಿದ ದಾನಶೂರ ಕರ್ಣ ಶಿರಸಂಗಿ ಲಿಂಗರಾಜ ದೇಸಾಯಿಯವರಾಗಿದ್ದಾರೆ.

ಲಕ್ಷ್ಮೇಶ್ವರ ಸಮೀಪದ ಶಿಗ್ಲಿಯಲ್ಲಿ ಸುಮಾರು 1861ರ ಜನವರಿ 10ರಂದು ಕೃಷಿ ಕುಟುಂಬದಲ್ಲಿ ಜನಿಸಿದರು. ತಂದೆ ಗೂಳಪ್ಪ ಮಡ್ಲಿ, ತಾಯಿ ಎಲ್ಲವ್ವ ದಂಪತಿಗಳ 6 ಜನ ಮಕ್ಕಳಲ್ಲಿ ರಾಮಪ್ಪ ಎಂಬ ಹೆಸರಿನ ಲಿಂಗರಾಜರು ನಾಲ್ಕನೆಯವರು. ಕೇವಲ 12 ವರ್ಷದವರಿದ್ದಾಗ 1872ರಲ್ಲಿ ನವಲಗುಂದ ಸಂಸ್ಥಾನಕ್ಕೆ ದತ್ತಕರಾದಾಗ ಸಂಸ್ಥಾನದ ಒಡತಿ ಗಂಗಾಬಾಯಿ ಇವರನ್ನು ದತ್ತಕ ಪಡೆದ ತಾಯಿಗಿಂತಲೂ ಅತ್ಯಂತ ಪ್ರೀತಿ–ವಾತ್ಸಲ್ಯದಿಂದ ಬೆಳೆಸಿದರು.

ಲಿಂಗರಾಜರು ಸಿರಸಂಗಿಯಲ್ಲಿ ಪ್ರಾಥಮಿಕ ಶಿಕ್ಷಣ ಮುಗಿಸಿ, ಕೊಲ್ಲಾಪುರದಲ್ಲಿ ಉನ್ನತ ವ್ಯಾಸಾಂಗ ಮಾಡುವ ಸಂದರ್ಭದಲ್ಲಿ ಇವರ ದತ್ತಕ ತಂದೆ ಜಾಯಪ್ಪ ಅವರಿಗೆ ಸಿರಸಂಗಿ ಸೇರಿದಂತೆ ಹತ್ತು ಗ್ರಾಮಗಳು ಉಂಬಳಿಯಾಗಿ ಸಿಕ್ಕಿದವು.



ಲಿಂಗರಾಜರಿಗೆ ಕೃಷಿ ಕ್ಷೇತ್ರದ ಮೇಲಿದ್ದ ಪ್ರೀತಿಯಿಂದ ಕೆರೆ ಕಟ್ಟಿಸುವುದು, ಸುಧಾರಿತ ಬೀಜ, ಗೊಬ್ಬರ ಬಳಕೆ ಮೂಲಕ ವೈಜ್ಞಾನಿಕ ಕೃಷಿಗೆ ಒತ್ತು ನೀಡಿದರು. ಅನಾಥರ ರಕ್ಷಣೆಗಾಗಿ ಧರ್ಮ ಶಾಲೆಗಳ ಸ್ಥಾಪನೆ ಮಾಡಿದರು. ಧರ್ಮದ ಬಗ್ಗೆ ಅಪಾರ ಗೌರವ ಹೊಂದಿದ್ದ ಅವರು ಅಥಣಿ, ಅವರಾಧಿ, ಗದಗ, ಹಾನಗಲ್ ಶ್ರೀಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರು. 1903ರಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಸ್ಥಾಪನೆಯ ಪ್ರಮುಖರಾಗಿದ್ದರು.

ಧಾರವಾಡ ಮತ್ತು ಬೆಂಗಳೂರಿನಲ್ಲಿ ನಡೆದ ಮಹಾಸಭಾದ ಅಧ್ಯಕ್ಷತೆ ವಹಿಸಿದ್ದ ಅವರು, ಅಂದು ಸ್ತ್ರೀ ಶಿಕ್ಷಣ, ನೀತಿ ಶಿಕ್ಷಣ, ವ್ಯಾಪಾರ, ಕೃಷಿ, ಸಾಸಂಸ್ಕೃತಿ, ಧಾರ್ಮಿಕ ಬದುಕಿನ ಬಗ್ಗೆ ಮಂಡಿಸಿದ ವಿಚಾರಗಳು ಅವರ ಸಾಮಾಜಿಕ ಕಳಕಳಿಗೆ ಸಾಕ್ಷಿಯಾಗಿವೆ.

ಬದುಕಿನುದ್ದಕ್ಕೂ ಶಿಕ್ಷಣ ಮತ್ತು ಸಮಾಜದ ಅಭಿವೃದ್ಧಿಗಾಗಿ ಶ್ರಮಿಸಿದ ಅವರು ತಮ್ಮ ಕೊನೆಯ ದಿನಗಳಲ್ಲಿ ಸಂಸ್ಥಾನದ ಆಸ್ತಿಯನ್ನು ಸಮಾಜಕ್ಕೆ ಸಮರ್ಪಿಸುವ ದೃಢ ನಿರ್ಧಾರದಿಂದ



ಇಚ್ಛಾಪತ್ರ ಬರೆದು ಆಗಿನ ಕಲೆಕ್ಟರ್ ಮೇ॥ ಜಾಕ್ಸನ್‌ರವರ ಕೈಗಿತ್ತು ತಮ್ಮ ಮರಣಾ ನಂತರ ವಿಷಯ ಬಹಿರಂಗಪಡಿಸಬೇಕೆಂದು ಮನವಿ ಮಾಡಿದ್ದರು. ಈಗಿನ ಪ್ರಸಿದ್ಧ ಕೆಎಲ್‌ಇ ಸಂಸ್ಥೆಗೆ ಸಂಸ್ಥಾನದ ಆಸ್ತಿಯನ್ನು ಭೂದಾನ ನೀಡಿದ ಯುಗಪುರುಷ ಶಿರಸಂಗಿ ಲಿಂಗರಾಜರು. ಅವರ ಶುದ್ಧ ಮನಸ್ಸಿನ ಸಮರ್ಪಣಾಭಾವದ ಕಾಮಧೇನು, ಶಿಕ್ಷಣ ಪ್ರೇಮಿ ಲಿಂಗರಾಜರು 23–8–1906ರಲ್ಲಿ ನವಲಗುಂದದಲ್ಲಿ ದೈವಾಧೀನರಾದರು.

ಆದರೆ ದುರ್ದೈವದ ಸಂಗತಿಯೆಂದರೆ, ಸಮಾಜಕ್ಕಾಗಿಯೇ ಸಮರ್ಪಿಸಿಕೊಂಡ ಮಹಾನ್ ಪುರುಷ ಲಿಂಗರಾಜರ ಹುಟ್ಟೂರಿನಲ್ಲಿ ಅವರ ಹೆಸರಿನ ವೃತ್ತವೊಂದನ್ನು ಬಿಟ್ಟರೆ ಮತ್ತೇನಿಲ್ಲ. ಮುಖ್ಯವಾಗಿ ಅವರು ಹುಟ್ಟಿ ಬೆಳೆದ ಮನೆ ಈಗಲೂ ಪಾಳುಬಿದ್ದಿರುವುದು ಖೇದಕರ ಸಂಗತಿ.

ಈ ಕುರಿತು ನಾಡಿನ ಹಿತಕ್ಕಾಗಿ ತಮ್ಮ ಬೆಲೆ ಕಟ್ಟಲಾಗದಷ್ಟು ಆಸ್ತಿಯನ್ನು ದಾನ ಮಾಡಿದ ಲಿಂಗರಾಜರ ಹೆಸರಿನಲ್ಲಿ ಅವರ ಹುಟ್ಟೂರಾದ ಶಿಗ್ಲಿಯಲ್ಲಿ ಅವರ ಸ್ಮಾರಕ ಮತ್ತು ಸಮಾಜಕ್ಕೆ ಉಪಯೋಗವಾಗುವ ಸೇವಾ ಸಂಸ್ಥೆ ಪ್ರಾರಂಭಿಸಬೇಕೆಂಬುದು ಗ್ರಾಮದ ಜನರ ಅಭಿಪ್ರಾಯವಾಗಿದೆ. ಈ ಬಗ್ಗೆ ಸರಕಾರಕ್ಕೆ ಗ್ರಾಮಸ್ಥರು ಮನವಿಯನ್ನು ಸಲ್ಲಿಸಿದ್ದಾರೆ. ಇದಕ್ಕಾಗಿ ಗ್ರಾ.ಪಂ ವತಿಯಿಂದ ಹೂವಿನ ಶಿಗ್ಲಿ ರಸ್ತೆಯಲ್ಲಿ ನೀಡಿದ 6 ಗುಂಟೆ ನಿವೇಶನದಲ್ಲಿ ಅವರ ಹೆಸರಿನ ಸಮುದಾಯ ಭವನ ನಿರ್ಮಾಣಕ್ಕಾಗಿ ಬುನಾದಿ ಹಾಕಿ ಕೈಬಿಡಲಾಗಿದೆ.

ಈ ನಡುವೆ ಪ್ರತಿ ವರ್ಷ ಜನವರಿ 10ರಂದು ಶಿಗ್ಲಿಯ ಲಿಂಗರಾಜರ ಜನ್ಮದಿನಾಚರಣೆಯ ದಿನ ಸಮಾಜ ಬಾಂಧವರು ಮತ್ತು ಗ್ರಾಮಸ್ಥರು ಸೇರಿ ವೃತ್ತದಲ್ಲಿನ ಮೂರ್ತಿಗೆ ಪೂಜೆ ಸಲ್ಲಿಸುವ ಕಾರ್ಯ ಮಾತ್ರ ನಡೆಯುತ್ತಿರುವುದು ಸಮಾಧಾನದ ಸಂಗತಿ.

**– ಮಲ್ಲು ಕಳಸಾಪುರ.**

# ಗಡಿಭಾಗದ ಶಾಲೆಗಳಲ್ಲಿ ಕನ್ನಡ ನಿರ್ಲಕ್ಷ್ಯ ಸಲ್ಲ

ನಮ್ಮ ರಾಜ್ಯದ ಗಡಿ ಭಾಗಗಳಲ್ಲಿನ ಅನ್ಯಭಾಷಾ ಮಾಧ್ಯಮ ಶಾಲೆಗಳಲ್ಲಿ (ತಮಿಳು, ಮಲಯಾಳಂ, ಮರಾಠಿ, ಉರ್ದು, ತೆಲುಗು) ಕನ್ನಡವನ್ನು ಪ್ರಥಮ ಭಾಷೆಯನ್ನಾಗಿ ಕಡ್ಡಾಯಗೊಳಿಸುವ ಸರ್ಕಾರದ ನಿರ್ಧಾರವು ಕೇವಲ ಕಾಗದಕ್ಕೆ ಸೀಮಿತವಾಗಿರುವುದು ಅತ್ಯಂತ ಖೇದಕರ.

ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆ ಯಾಗಿದ್ದರೂ, ಗಡಿ ಜಿಲ್ಲೆಗಳಲ್ಲಿ ನಮ್ಮ ಭಾಷೆಯು ಪರಕೀಯರಂತೆ ಅನಾಥವಾಗಿರುವುದು ಸರ್ಕಾರದ ದಿವ್ಯ ನಿರ್ಲಕ್ಷ್ಯಕ್ಕೆ ಸಾಕ್ಷಿ. ನೆರೆಯ ರಾಜ್ಯಗಳು ತಮ್ಮ ಭಾಷೆಯ ರಕ್ಷಣೆಗಾಗಿ ಉಗ್ರವಾದ ನಿಲುವು ತಳೆಯುತ್ತಿರುವಾಗ, ನಮ್ಮ ಸರಕಾರವು ಸಮಿತಿ, ಚರ್ಚೆ ಎಂಬ ನೆಪವೊಡ್ಡಿ ಕಾಲಹರಣ ಮಾಡುತ್ತಿರುವುದು ಕನ್ನಡ




ವಿರೋಧಿ ಧೋರಣೆಯಲ್ಲದೆ ಮತ್ತೇನು?

ಕನ್ನಡದ ಅನ್ನ ಉಣ್ಣುತ್ತಾ, ಇಲ್ಲಿನ ಸವಲತ್ತು ಪಡೆಯುವ ಯಾವುದೇ ಶಿಕ್ಷಣ ಸಂಸ್ಥೆಯು ಕನ್ನಡವನ್ನು ಮೊದಲ ಭಾಷೆಯಾಗಿ ಕಲಿಸಲು ಹಿಂಜರಿಯುವುದು ಅಕ್ಷಮ್ಯ ಅಪರಾಧ. ಸರಕಾರಕ್ಕೆ ನಿಜವಾಗಿಯೂ ಭಾಷಾಭಿಮಾನವಿದ್ದರೆ, ತಕ್ಷಣವೇ ಕಟ್ಟುನಿಟ್ಟಿನ ಆದೇಶ ಹೊರಡಿಸಿ, ಕನ್ನಡ ಕಲಿಸದ ಶಾಲೆಗಳ ಮಾನ್ಯತೆಯನ್ನು ರದ್ದುಪಡಿಸಬೇಕು. ಗಡಿಭಾಗದ ಕನ್ನಡಿಗರ ಹಿತಾಸಕ್ತಿಯನ್ನು ಬಲಿಕೊಟ್ಟು, ಅನ್ಯಭಾಷಿಕರ ತುಷ್ಟೀಕರಣ ಮಾಡುವುದನ್ನು ಸರಕಾರ ನಿಲ್ಲಿಸಿಲಿ.

**– ಡಾ.ವಿಜಯಕುಮಾರ ಎಚ್.ಕೆ. ರಾಯಚೂರು.**

# ಕಡಲೆ ಖರೀದಿ ಕೇಂದ್ರವನ್ನು ಕೂಡಲೇ ಆರಂಭಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂಗಾರಿ ಹಂಗಾಮಿನ ರೈತರ ಪ್ರಮುಖ ಬೆಳೆ ಕಡಲೆಯ ಬೆಂಬಲ ಬೆಲೆ ಖರೀದಿ ಕೇಂದ್ರವನ್ನು ಈ ತಿಂಗಳಲ್ಲಿಯೇ ಪ್ರಾರಂಭಿಸುವಂತೆ ಕೃಷಿಕ ಸಮಾಜದ ತಾಲೂಕಾಧ್ಯಕ್ಷ ಚನ್ನಪ್ಪ ಚಣ್ಮುಕಿ ಜಿಲ್ಲಾಧಿಕಾರಿಗಳಿಗೆ ಆಗ್ರಹಿಸಿದ್ದಾರೆ



ಈ ಕುರಿತು ಅವರು ಪತ್ರಿಕಾ ಹೇಳಿಕೆ ನೀಡಿ, ಕೇಂದ್ರ ಸರ್ಕಾರ ಹಿಂಗಾರಿಯ ಕಡಲೆ, ಜೋಳ, ಕುಸುಬಿ, ಸೂರ್ಯಕಾಂತಿ ಪ್ರಮುಖ ಬೆಳೆಗಳಿಗೆ ಬೆಂಬಲ ಬೆಲೆ ಘೋಷಣೆ ಮಾಡಿದೆ. ಆದರೆ ಸರ್ಕಾರ ಸಕಾಲಿಕ ಬೆಂಬಲ ಬೆಲೆ ಕೇಂದ್ರ ಪ್ರಾರಂಭಿಸುವಲ್ಲಿ ಏಕೆ ಮೀನಾಮೇಷ ಎಣಿಸುತ್ತಿದೆ? ಪ್ರತಿ ವರ್ಷವೂ ರೈತರು ಮುಕ್ತ ಮಾರುಕಟ್ಟೆಯಲ್ಲಿ ಬೆಳೆಯನ್ನೆಲ್ಲ ಕಡಿಮೆ ಬೆಲೆಗೆ ಮಾರಾಟ ಮಾಡಿದ ಮೇಲೆ, ರೈತರ ಹೋರಾಟದ ಬಳಿಕ ಎಚ್ಚೆತ್ತು ಬೆಂಬಲ ಬೆಲೆ ಕೇಂದ್ರ ಪ್ರಾರಂಭಿಸುತ್ತದೆ. ಇದು ಬಂಡವಾಳಶಾಹಿಗಳಿಗೆ ಅನಕೂಲ ಮಾಡಿಕೊಟ್ಟಂತಾಗುತ್ತದೆ. ಕಂದಾಯ, ಕೃಷಿ, ತೋಟಗಾರಿ–ಕೆ, ಎಪಿಎಂಸಿ ಇಲಾಖೆಯ ಅಧಿಕಾರಿಗಳಿಗೆ ಮುಂಗಾರಿ–ಹಿಂಗಾರಿನ ಬಿತ್ತನೆ ಮತ್ತು ಕಟಾವಿನ ಅವಧಿ ಯಾವಾಗ ಎಂಬುದು ಗೊತ್ತಿರುವುದಿಲ್ಲವೇ? ಒಂದು ವೇಳೆ ತಪ್ಪಾದ ಮಾಹಿತಿ ದಾಖಲಾಗಿದ್ದರೂ ಅದನ್ನು ಬದಲಾಯಿಸುವ ಮನಸ್ಥಿತಿ, ಕಾಳಜಿ ಏಕೆ ತೋರುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ.

ರೈತರು ತಮ್ಮ ನ್ಯಾಯಯುತ ಬೇಡಿಕೆಗಳನ್ನು ಹೋರಾಟ ಮಾಡಿಯೇ ಪಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಆಡಳಿತ ಸರ್ಕಾರ, ವಿರೋಧ ಪಕ್ಷ, ಅಧಿಕಾರಿ ವರ್ಗದವರು ರೈತರ ಬಗ್ಗೆ ಇರುವ ನಿಷ್ಕಾಳಜಿಯನ್ನು ಸಾಕ್ಷೀಕರಿಸುತ್ತದೆ.

3 ತಿಂಗಳ ಕಡಲೆ ಬೆಳೆಯನ್ನು ಅಕ್ಟೋಬರ್‌ನಲ್ಲಿಯೇ ಬಿತ್ತನೆ ಮಾಡಲಾಗಿದ್ದು, ಇದೀಗ ಕಡಲೆ ಕಟಾವು ಹಂತ ತಲುಪಿದೆ. ಈಗಾಗಲೇ ಸಣ್ಣ ಪ್ರಮಾಣದಲ್ಲಿ ಕಡಲೆ ಮಾರುಕಟ್ಟೆಗೆ ಬರುತ್ತಿದೆ. 5875 ರೂ ಬೆಂಬಲ ಬೆಲೆ ಕೇಂದ್ರ ಸರ್ಕಾರ ಘೋಷಣೆ ಮಾಡಿದೆ. ರಾಜ್ಯ ಸರ್ಕಾರ 500 ರೂ ಪ್ರೋತ್ಸಾಹಧನದೊಂದಿಗೆ ಆದಷ್ಟು ಬೇಗ ಖರೀದಿ ಕೇಂದ್ರ ಪ್ರಾರಂಭಿಸಿ ಸಂಕಷ್ಟದಲ್ಲಿರುವ ರೈತರಿಗೆ ಅನಕೂಲ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

# ಪ್ರದೀಪ ಹಿರೇಮಠರಿಗೆ ಪಿಎಚ್‌ಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ರಾಮಕೃಷ್ಣ ವಿವೇಕಾನಂದ ಆಶ್ರಮದ ವಿದ್ಯಾರ್ಥಿ ಪ್ರದೀಪ ಹಿರೇಮಠ ಸ್ವಾಮಿ ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಹಾಗೂ ಸ್ವಾಮಿ ಜಗನ್ನಾಥಾನಂದ ಸ್ವಾಮೀಜಿ ಅವರ ಮಾರ್ಗದರ್ಶನದಲ್ಲಿ ಕೆ.ಎಲ್.ಇ ತಾಂತ್ರಿಕ ವಿಶ್ವವಿದ್ಯಾಲಯದಿಂದ ಗಣಿತ ಶಾಸ್ತ್ರದಲ್ಲಿ ಪಿ.ಎಚ್.ಡಿ ಪದವಿಯನ್ನು ಪಡೆದಿದ್ದಾರೆ. ಸ್ವಾಮಿ ವಿವೇಕಾನಂದರ ವಿಚಾರಗಳಿಂದ ಸ್ಫೂರ್ತಿಗೊಂಡು ಶೈಕ್ಷಣಿಕ ಹಂತದಲ್ಲಿ



ಹಲವಾರು ಸವಾಲುಗಳನ್ನು ಮೆಟ್ಟಿ ನಿಂತು ಯಶಸ್ಸನ್ನು ಕಂಡಿದ್ದಾರೆ.

ಕೆ.ಎಲ್.ಇ ತಾಂತ್ರಿಕ ವಿಶ್ವವಿದ್ಯಾಲಯದ ಗಣಿತ ವಿಭಾಗದ ಪ್ರಾಧ್ಯಾಪಕ ಡಾ. ಭಾರತಿ ಶೆಟ್ಟರ್ ಹಾಗೂ ಡಾ. ರಮೇಶ ಜಿ.ಕೆ ಅವರ ಮಾರ್ಗದರ್ಶನದಲ್ಲಿ 'ಕಾಂಪಿಟೇಷನಲ್ ಸ್ಟಡಿ ಆನ್ ಹೀಟ್ ಟ್ರಾನ್ಸಪರ್ ಇನ್ ಮ್ಯಾಗ್ನಟೈಸ್ಡ್ ಫ್ಲುಯಿಡ್ ಫ್ಲೋ' ಎಂಬ ಮಹಾಪ್ರಬಂಧಕ್ಕೆ ಪಿ.ಎಚ್.ಡಿ ಪಡೆದಿದ್ದಾರೆ.

ಪ್ರದೀಪ ಹಿರೇಮಠರನ್ನು ರಾಮಕೃಷ್ಣ ವಿವೇಕಾನಂದ ಆಶ್ರಮದ ಸಮಸ್ತ ಭಕ್ತರ ಪರವಾಗಿ ಹಾಗೂ ಸ್ವಾಮಿ ವಿವೇಕಾನಂದರ ಅಧ್ಯಯನ ಕೇಂದ್ರದ ಪರವಾಗಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



ಅಖಿಲ ಭಾರತ ವೀರಶೈವ ಮಹಾಸಭಾ ಮುಂಡರಗಿ ತಾಲೂಕು ಘಟಕ ಪ್ರಕಟಿಸಿದ 2026ನೇ ಸಾಲಿನ ದಿನದರ್ಶಿಕೆಯನ್ನು ಮುಂಡರಗಿಯ ಅನ್ನದಾನೇಶ್ವರ ಮಠದಲ್ಲಿ ಪೂಜ್ಯ ಜ. ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು ಬಿಡುಗಡೆ ಮಾಡಿದರು. ಮಹಾಸಭಾದ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ, ಪ್ರಧಾನ ಕಾರ್ಯದರ್ಶಿ ಮುರುಗೇಶ ಬಡ್ನಿ, ಮುಂಡರಗಿ ತಾಲೂಕಾಧ್ಯಕ್ಷ ಶಿವನಗೌಡ ಪಾಟೀಲ, ಕಾರ್ಯದರ್ಶಿ ಎಸ್.ವ್ಹಿ. ಪಾಟೀಲ, ವಿರೂಪಾಕ್ಷಪ್ಪ ಲಕ್ಕುಂಡಿ, ಕೊಟ್ರಪ್ಪ ಬ್ಯಾಳಿ, ಕವಿತಾ ಉಳ್ಳಾಗಡ್ಡಿ, ಎಸ್.ಬಿ. ಪಾಟೀಲ, ಸಿದ್ದಲಿಂಗಯ್ಯ ಹಿರೇಮಠ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಬೋರ್‌ವೆಲ್ ಕಾಮಗಾರಿಗೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರ ಸಭೆಯ ವಾರ್ಡ್ ನಂ. 2 ಹಿರಿಯ ಸದಸ್ಯರಾದ ವಿನಾಯಕ ಮಾನ್ವಿಯವರು ವಾರ್ಡಿನ ವ್ಯಾಪ್ತಿಯ ಮುಲ್ಲಾ ಓಣಿಯಲ್ಲಿ ಹೊಸ ಬೋರ್‌ವೆಲ್ ನಿರ್ಮಾಣಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಾರ್ಡಿನಲ್ಲಿ ಪ್ರತಿ ಮನೆ ಮನೆಗೂ ಪೈಪ್‌ಲೈನ ಜೋಡಣೆ ಕಾರ್ಯ ಪ್ರಗತಿಯಲ್ಲಿದ್ದು, ಬರುವ ದಿನಗಳಲ್ಲಿ ವಾರ್ಡಿನಲ್ಲಿ ನೀರಿನ ಸಮಸ್ಯೆ ಇರುವ ಭಾಗದಲ್ಲಿ ಈ ಬೋರ್‌ವೆಲ್‌ನಿಂದ ನೀರು ಸರಬರಾಜು ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಸವರಾಜ ಪತ್ತಾರ, ಬಾಬು ಎಲಿಗಾರ, ಬಸವರಾಜ ದೊಡ್ಡಮನಿ, ಅಕ್ಬರ ತಳ್ಳಹಳ್ಳಿ, ನಗರಸಭೆ ಕಮ್ಯೂನಿಟಿ ಮೊಬೈಲೈಜರುಗಳಾದ ಅಮೃತಾ ಮೇರವಾಡೆ, ನಿಖಿತಾ ಆರ್.ಪಾಂಡ್ರೆ ಸೇರಿದಂತೆ ವಾರ್ಡಿನ ಪ್ರಮುಖರು ಉಪಸ್ಥಿತರಿದ್ದರು.

ಯುವಕರ ಕೈಯಲ್ಲಿದೆ ಭವಿಷ್ಯದ ಸಮಾಜ ನಿರ್ಮಾಣ: ಗುರಿಕಾರ

# ಸಂಸ್ಕಾರ ಮತ್ತು ಸಂಸ್ಕೃತಿಯ ಪ್ರತೀಕವೇ ಶಿಕ್ಷಣ: ಚಂದ್ರೇಗೌಡ

■ವಿಜಯಸಾಕ್ಷಿ ಸುದ್ದಿ, ಗಂಗಾವತಿ

ಶಿಕ್ಷಣವು ಸಂಸ್ಕಾರ ಮತ್ತು ಸಂಸ್ಕೃತಿಯ ಪ್ರತೀಕವಾಗಿದೆ. ಪ್ರತಿ ವಿದ್ಯಾರ್ಥಿಯು ಶಿಕ್ಷಣದ ಜೊತೆಗೆ ಸಂಸ್ಕಾರ–ಸಂಸ್ಕೃತಿ ಅನುಸರಿಸಿ ಸಾಗುವುದರಿಂದ ಉತ್ತಮ ಜೀವನ ರೂಪಿಸಿಕೊಳ್ಳಲು ಸಾಧ್ಯ ಎಂದು ನಿವೃತ್ತ ಉಪನ್ಯಾಸಕ ಪ್ರೊ. ಚಂದ್ರೇಗೌಡ ಪೊಲೀಸ್ ಪಾಟೀಲ ಹೇಳಿದರು.

ನಗರದ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ನಡೆದ ಸಮಾಜಶಾಸ್ತ್ರ ಸ್ನಾತಕೋತ್ತರ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯಾರ್ಥಿಗಳಲ್ಲಿ ಪ್ರಾಮಾಣಿಕ ಮನೋಭಾವ ಅಗತ್ಯ. ಪ್ರತಿಯೊಬ್ಬರು ತಮ್ಮ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿದರೆ ಭವಿಷ್ಯದ ದಿನಗಳಲ್ಲಿ ತಕ್ಕ ಫಲ ದೊರೆಯುತ್ತದೆ ಎಂದು ಅವರು ಕರೆ ನೀಡಿದರು.




ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಶಿವರಾಕ ಗುರಿಕಾರ ಮಾತನಾಡಿ, ಪ್ರತಿಯೊಬ್ಬರು ಪ್ರಾಮಾಣಿಕ ಮನೋಭಾವ ರೂಢಿಸಿಕೊಳ್ಳಬೇಕು. ಭವಿಷ್ಯದ ಸಮಾಜ ನಿರ್ಮಾಣ ಇಂದಿನ ಯುವಪೀಳಿಗೆ ಕೈಯಲ್ಲಿದೆ ಎಂದು ಅಭಿಪ್ರಾಯಪಟ್ಟರು.

ಪ್ರಾಸ್ತಾವಿಕ ಮಾತನಾಡಿದ ಕಾಲೇಜಿನ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಫಣಿರಾಜ್ ಬಾರಿಕಾರ್ ಅವರು, ವಿದ್ಯಾರ್ಥಿಗಳಿಗೆ ತರಗತಿಯ ಕೊಠಡಿಗಳು ಭವಿಷ್ಯವನ್ನು ರೂಪಿಸುವ ದೇವಾಲಯಗಳು ಇದ್ದಂತೆ, ಪ್ರತಿಯೊಬ್ಬ ವಿದ್ಯಾರ್ಥಿಯು ತರಗತಿಗಳಲ್ಲಿ ತಿಳಿಸುವ ವಿಷಯಗಳನ್ನು ಮನದಟ್ಟು ಮಾಡಿಕೊಂಡು ಪ್ರಯತ್ನಶೀಲರಾಗಿ ಮುಂದುವರಿಯಬೇಕು ಎಂದರು.

ಸಮಾಜಶಾಸ್ತ್ರ ವಿಭಾಗದ ಹಿರಿಯ ಅತಿಥಿ ಉಪನ್ಯಾಸಕ ಡಾ. ಸೋಮಶೇಖರ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಶಿಸ್ತು ಸಂಯಮ ಅವಶ್ಯವಾಗಿದೆ. ಜೊತೆಗೆ ಮಾನವೀಯ ಮೌಲ್ಯಗಳನ್ನು ರೂಡಿಸಿಕೊಳ್ಳುವುದರ ಜೊತೆಗೆ ಸಮಾಜವನ್ನು ಸನ್ಮಾರ್ಗದಲ್ಲಿ ಕೊಂಡೊಯ್ಯುವ ಕಾರ್ಯವನ್ನು ಪ್ರತಿಯೊಬ್ಬರು ಅನುಸರಿಸ ಬೇಕಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಭಾಗದ ಉಪನ್ಯಾಸಕರಾದ ಡಾ. ಮುದಕನಗೌಡ ಕೆ, ಕಳಕಪ್ಪ ಕುಂಬಾರ್, ಡಾ. ಪಾಂಡುರಂಗ ದೊಡ್ಮನಿ, ಡಾ. ಸುಭಾಷ್ ಚಂದ್ರ ಮತ್ತಿತರರು ಇದ್ದರು.

## ಜ. 21ರಂದು ನಿಜಶರಣ ಅಂಬಿಗರ ಚೌಡಯ್ಯ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ಶರಣರ ಅನುಭವ ಮಂಟಪದಲ್ಲಿ ನಿಷ್ಠುರವಾಗಿ ಮಾತನಾಡುವ ಶರಣ ಎಂದರೆ ಅಂಬಿಗರ ಚೌಡಯ್ಯ. ಎಲ್ಲ ಶರಣರಲ್ಲಿ ನಿಜಶರಣ ಎಂದು ಖ್ಯಾತಿ ಪಡೆದ ಅಂಬಿಗರ ಚೌಡಯ್ಯನವರ ಜಯಂತಿಯನ್ನು ಈ ಬಾರಿ ಜನವರಿ 21ರಂದು ಅದ್ಧೂರಿಯಾಗಿ ಆಚರಿಸಲು ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಸಂಘಟನೆಯಿಂದ ನಡೆದ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಸಂಘಟನೆಯ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ಸಭೆಯಲ್ಲಿ ಮಾತನಾಡಿ, ಈ ಬಾರಿ ಜಯಂತಿಗೆ ನಗರದ ಗಣ್ಯ ಮಹನೀಯರನ್ನು ಆಹ್ವಾನಿಸಲಾಗುವುದು. ಬೈಕ್ ರ್‍ಯಾಲಿ, ಡೊಳ್ಳಿನ ಮೆರವಣಿಗೆ, ಕುಂಭ ಮೇಳ ಜರುಗುವುದು. ಕಾರಣ, ಸಮುದಾಯದ ಎಲ್ಲರೂ ಭಾಗವಹಿಸುವಂತೆ ಕರೆ ನೀಡಿದರು.

ಸಮಾಜ ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ಗದಗ ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯ, ದೌರ್ಜನ್ಯ ಸಮಿತಿ ಸದಸ್ಯರಾದ ಸಂಗಮೇಶ ಹಾದಿಮನಿ ಮಾತನಾಡಿ, ಮಹಾಮಾರಿ ಕೊರೋನಾ ಸಂದರ್ಭದಲ್ಲಿ ಜಯಂತಿಯನ್ನು 2020ರಿಂದ 2025ರವರೆಗೆ ಸರಳ ರೀತಿಯಲ್ಲಿ ಆಚರಿಸಿಕೊಂಡು ಬರಲಾಗಿತ್ತು. ಪ್ರಸ್ತುತ ಜನವರಿ 21ರಂದು ಅದ್ಧೂರಿ ಜಯಂತಿ ಆಚರಿಸಲು ತೀರ್ಮಾನಿಸಲಾಗಿದ್ದು, ಸಮಾಜದ ಯುವಕರು, ಹಿರಿಯರು, ಮಹಿಳೆಯರು ಭಾಗವಹಿಸಿ ಯಶಸ್ವಿಗೊಳಿಸಲು ವಿನಂತಿಸಿದರು.

ಈ ಸಂದರ್ಭದಲ್ಲಿ ಆನಂದ ಸುಣಗಾರ, ಬಸವರಾಜ ಗುಡಿಸಾಗರ, ಸುಜಾತಾ ಗುಡಿಸಾಗರ, ಪ್ರವೀಣ ನೀಲಣ್ಣವರ, ರವಿಕುಮಾರ ಗುಡಿಸಾಗರ, ಮಂಜುನಾಥ ಗುಡಿಸಾಗರ, ರಾಜು ಪೂಜಾರ, ಶಿವದೇವ ಹಾದಿಮನಿ, ಮುತ್ತು ಅಂಬಿಗೇರ, ಮಲ್ಲು ಬಾರಕೇರ, ಸುದೀಪ ಕಮತರ, ರಾಜು ಬಿನ್ನಾಳ, ದೇವು ನವಲಗುಂದ, ಹರೀಶ ಬಾರಕೇರ, ಗುರು ತಿರ್ಲಾಪೂರ ಮುಂತಾದವರು ಉಪಸ್ಥಿತರಿದ್ದರು.

### ಲಿಂಗಾಯತ ಪ್ರಗತಿಶೀಲ ಸಂಘದ 2779ನೇ ಶಿವಾನುಭವದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ತಂದೆ-ತಾಯಿಯ ಋಣವನ್ನು ತೀರಿಸುವ ಕೆಲಸ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ತಾಯಿಗಿಂತ ಮಿಗಿಲು ಯಾರೂ ಇಲ್ಲ. ತಂದೆ-ತಾಯಿಯೇ ದೇವರು. ಮಾತು ಬಾರದ ಮಗುವಿಗೆ ಮಾತು ಕಲಿಸುವವಳು ಅವ್ವ. ಪ್ರತಿಯೊಬ್ಬರೂ ಬದುಕಿನಲ್ಲಿ ತಂದೆ-ತಾಯಿಯ ಋಣವನ್ನು ತೀರಿಸುವ ಕೆಲಸ ಮಾಡಬೇಕು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2779ನೇ ಶಿವಾನುಭವದಲ್ಲಿ ಮಾತನಾಡಿದ ಶ್ರೀಗಳು, ಉಪ್ಪಿಗಿಂತ ರುಚಿಯಿಲ್ಲ, ತಾಯಿಗಿಂತ ಬಂಧುವಿಲ್ಲ ಎಂಬ ಮಾತು ಸತ್ಯ. ಕೆಟ್ಟ ಮಕ್ಕಳು ಹುಟ್ಟಬಹುದು, ಕೆಟ್ಟ ತಾಯಿ ಇರಲಾರಳು. ಮಕ್ಕಳ ಲಾಲನೆ-ಪಾಲನೆ ಮಾಡುವ ಮೂಲಕ ಮನೆಯ ಎಲ್ಲಾ ಜವಾಬ್ದಾರಿಗಳನ್ನು ಅವ್ವ ಹೊರುತ್ತಾಳೆ. ಮಕ್ಕಳಲ್ಲಿ ಬೇಧ-ಭಾವ ಮಾಡದೇ ಸಮಾನವಾಗಿ ಬೆಳೆಸುವ ಅವ್ವ ಮಕ್ಕಳ ಪಾಲಿನ ದೇವರು. ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವ್ವನ ಋಣವನ್ನು ಅವ್ವ ಸೇವಾ ಟ್ರಸ್ಟ್ ಮೂಲಕ ತೀರಿಸುತ್ತಿರುವುದು ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಉಪನ್ಯಾಸಕರಾಗಿ ಆಗಮಿಸಿದ ಹುಬ್ಬಳ್ಳಿಯ ಎಸ್‌ಜೆಎಂ ಕಾಲೇಜಿನ ಡಾ. ಸುಪ್ರಿಯಾ ಮಾಲಶೆಟ್ಟಿ ಮಾತನಾಡಿ, ಸಾವಿರಾರು ತಂದೆಗಿಂತ ಒಬ್ಬ ತಾಯಿ ಶ್ರೇಷ್ಠ. ಸಕಲರಿಗೂ ಪೂಜ್ಯನೀಯ ತಾಯಿ.



ಅವ್ವ ಬದುಕು ನೀಡುವುದರ ಜೊತೆಗೆ ಬದುಕುವ ಕಲೆಯನ್ನು ಕಲಿಸುತ್ತಾಳೆ. ಅವ್ವಳ ಪ್ರೀತಿಯಲ್ಲಿ ಅಪೇಕ್ಷೆ ಇಲ್ಲ. ಮಕ್ಕಳಿಗೋಸ್ಕರ ಏನು ಬೇಕಾದರೂ ಮಾಡುವಳು. ಜೀವನದ ಪಾಠ ಕಲಿಸುತ್ತಾಳೆ. ತಾಯಿಯ ಶ್ರದ್ಧೆ, ಸಹನೆ, ಪ್ರಾಮಾಣಿಕತೆ, ಪ್ರೀತಿ ವರ್ಣಿಸಲಸಾಧ್ಯ. ಬಸವಣ್ಣನವರ ವಚನಗಳು ಅವ್ವನ ಸೆರಗು ಇದ್ದಂತೆ ಎಂದರು.

ಎಲ್‌ಎಲ್‌ಎಂ ಪರೀಕ್ಷೆ ಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಸಹನಾ ಅನಂತ ಕಾರ್ಕಳ ಅವರನ್ನು ಸನ್ಮಾನಿಸಲಾಯಿತು. ಸನ್ಮಾನೋತ್ತರವಾಗಿ ಮಾತನಾಡಿದ ಸಹನಾ ಕಾರ್ಕಳ, ಮಕ್ಕಳ ಜೀವನದಲ್ಲಿ ಅವ್ವ-ಅಪ್ಪನ ಪಾತ್ರ ಬಹು ದೊಡ್ಡದು ಎಂದರು.

ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್‌ನ ಕಾರ್ಯದರ್ಶಿ ಶಶಿ ಸಾಲಿ ಮಾತನಾಡಿ,

ಅತಿಥಿಗಳಾಗಿ ಆಗಮಿಸಿದ ಗದುಗಿನ ಅವ್ವ ಸೇವಾ ಟ್ರಸ್ಟ್‌ನ ಸಂಚಾಲಕರಾದ ಡಾ. ಬಸವರಾಜ ಧಾರವಾಡ ಮಾತನಾಡಿ, ಸಭಾಪತಿಗಳಾದ ಬಸವರಾಜ ಹೊರಟ್ಟಿಯವರು ಸಮಾಜಮುಖಿಯಾಗಿ ಸೇವೆ ಸಲ್ಲಿಸಲು ಲಿಂ. ಜಗದ್ಗುರು ಸಿದ್ದಲಿಂಗ ಮಹಾಸ್ವಾಮಿಗಳ ಅಮೃತ ಹಸ್ತದಿಂದ 2011ರಲ್ಲಿ ಉದ್ಘಾಟನೆಯಾದ ಅವ್ವ ಸೇವಾ ಟ್ರಸ್ಟ್ ಹತ್ತು ಹಲವಾರು ವಿಧಾಯಕ ಕಾರ್ಯಕ್ರಮಗಳನ್ನು ಹಾಕಿಕೊಂಡು ದೀನ-ದಲಿತರಿಗೆ, ದಿವ್ಯಾಂಗರಿಗೆ, ಮಹಿಳೆಯರಿಗೆ, ಶಾಲಾ ವಿದ್ಯಾರ್ಥಿಗಳಿಗೆ, ವಿಶೇಷ ಸಾಧನೆ ಮಾಡಿದವರಿಗೆ ಗೌರವ ಸಲ್ಲಿಸುತ್ತ ಬಂದಿದೆ. ಶ್ರೀಮಠವು ಶಿವಾನುಭವದ ಮೂಲಕ ಉತ್ತಮ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಸಭಾಪತಿಗಳಾದ ಬಸವರಾಜ ಹೊರಟ್ಟಿಯವರಿಗೆ ತಾಯಿಯ ಬಗ್ಗೆ ಅಪಾರವಾದ ಪ್ರೀತಿ ಇದ್ದುದರಿಂದ ಅವ್ವನ ನೆನಪು ಸದಾ ಇರಲೆಂದು ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ ಅನೇಕ ಸಮಾಜಮುಖಿ ಕೆಲಸವನ್ನು ಮಾಡುತ್ತಾ ಬಂದಿದ್ದಾರೆ ಎಂದರು.

ಅತಿಥಿಗಳಾಗಿ ಆಗಮಿಸಿದ ಮಾಜಿ ಸಹಕಾರ ಸಚಿವ ಎಸ್.ಎಸ್. ಪಾಟೀಲ, ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಶಿವಾನಂದ ಪಟ್ಟಣಶೆಟ್ಟರ, ಕ.ಸಾ.ಪ ಧಾರವಾಡ ಅಧ್ಯಕ್ಷ ಲಿಂಗರಾಜ ಅಂಗಡಿ, ಮಾಧ್ಯಮ ಪ್ರತಿನಿಧಿಗಳಾದ ಅನಂತ ಕಾರ್ಕಳ ಉಪಸ್ಥಿತರಿದ್ದರು.

ಅವ್ವ ಸೇವಾ ಟ್ರಸ್ಟ್ ವತಿಯಿಂದ ಮಹಿಳಾ ಪೌರ ಕಾರ್ಮಿಕರಿಗೆ ಗೌರವ ಸಮರ್ಪಣೆಯನ್ನು ಗದಗ ಅವ್ವ ಸೇವಾ ಟ್ರಸ್ಟ್ ಸಂಚಾಲಕರಾದ ಡಾ ಬಸವರಾಜ ಧಾರವಾಡರವರು ಮಾಡಿದರು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ವಚನಸಂಗೀತ ನಡೆಸಿಕೊಟ್ಟರು. ಧಾರ್ಮಿಕ ಗ್ರಂಥಪಠಣವನ್ನು ಅವನಿ ಎಂ.ಪುಣೇಕರ, ವಚನ ಚಿಂತನವನ್ನು ಶ್ರೇಯಾ ಡಿ.ವಿಠ್ಠಲ್ಕರ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಜಗದ್ಗುರು ತೋಂಟದಾರ್ಯ ಶಿಕ್ಷಣ ಸಂಸ್ಥೆಗಳ ನೌಕರರ ಪತ್ತಿನ ಸಹಕಾರ ಸಂಘ ಗದಗ ಹಾಗೂ ಅವ್ವ ಸೇವಾ ಟ್ರಸ್ಟ್ ಹುಬ್ಬಳ್ಳಿ ಇವರು ವಹಿಸಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ, ಮಠದ ಭಕ್ತರು ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

## ಶ್ರೀ ಅಯ್ಯಪ್ಪ ದೇವಸ್ಥಾನದಲ್ಲಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿವೇಕಾನಂದ ಬಡಾವಣೆ (ರಾಜೀವಗಾಂಧಿ ನಗರ), ಶ್ರೀ ಸಾಯಿಬಾಬಾ ಮಂದಿರದ ಎದುರಿಗೆ ಹಾತಲಗೇರಿ ರಸ್ತೆಯಲ್ಲಿರುವ ಶ್ರೀ ಅಯ್ಯಪ್ಪ ದೇವಸ್ಥಾನದಲ್ಲಿ ಎ. ನಾಗರಾಜ ಗುರುಸ್ವಾಮಿಗಳ 45 ವರ್ಷಗಳ ಅವಿಸ್ಮರಣೀಯ ಸೇವೆ ಮತ್ತು 26 ವರ್ಷಗಳಿಂದ ನಿರಂತರ ಓಂ ಶ್ರೀ ಅಯ್ಯಪ್ಪಸ್ವಾಮಿಯ ನಿತ್ಯ ಪೂಜೆ ಗುರುಸ್ವಾಮಿಗಳು ಹಾಗೂ ಶಿಷ್ಯ ಬಳಗದಿಂದ ನಡೆಸಿಕೊಂಡು ಬಂದಿದೆ.

ಈ ವರ್ಷ ಜ. 7ರಂದು ಮಸಾರಿ ಶ್ರೀ ಸಿದ್ಧಿವಿನಾಯಕ ದೇವಸ್ಥಾನದಿಂದ ಎ. ನಾಗರಾಜ ಗುರುಸ್ವಾಮಿಗಳು ಹಾಗೂ ಶಿಷ್ಯ ಬಳಗದ ನೇತೃತ್ವದಲ್ಲಿ ಅಯ್ಯಪ್ಪಸ್ವಾಮಿ ಮೂರ್ತಿ ಮೆರವಣಿಗೆಯು ಜ್ಯೋತಿ ಹಾಗೂ ಪೂರ್ಣಕುಂಭದೊಂದಿಗೆ ಜರುಗಿ-ತು. ಜ. 8ರಂದು ಮಧ್ಯಾಹ್ನ ಮಹಾಅನ್ನಸಂತರ್ಪಣೆ ಜರುಗಿತು. ಜ. 9ರಂದು ಬೆಳಿಗ್ಗೆ 9 ಗಂಟೆಗೆ ಇರುಮುಡಿ ಕಟ್ಟುವ ಕಾರ್ಯಕ್ರಮ ಜರುಗಿತು.

## ಸಾರ್ವಜನಿಕ ಸಮಾಲೋಚನೆ ಸಭೆ ಜ. 12ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆಯ ಸನ್ 2026-27ನೇ ಸಾಲಿನ ಆಯವ್ಯಯ ತಯಾರಿಸಲು ಸರ್ಕಾರದ ಸುತ್ತೋಲೆ ಮಾರ್ಗಸೂಚಿಗಳ ಪ್ರಕಾರ ಸ್ಥಳೀಯ ಸಂಘ-ಸಂಸ್ಥೆಗಳ, ಗಣ್ಯ ನಾಗರಿಕರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ, ವಾಣಿಜ್ಯೋದ್ಯಮ ನಿಗಮಗಳ ಪದಾಧಿಕಾರಿಗಳೊಂದಿಗೆ ಹಾಗೂ ಜನಪ್ರತಿನಿಧಿಗಳು ಮತ್ತು ಗೌರವಾನ್ವಿತ ಸದಸ್ಯರುಗಳೊಂದಿಗೆ ಸಮಾಲೋಚಿಸಿ ಸಲಹೆ ಸೂಚನೆಗಳನ್ನು ಪಡೆದು ಬಜೆಟ್ ಆಯವ್ಯಯ ತಯಾರಿಸಿ ಮಂಡಿಸಬೇಕಾಗಿದೆ.

ಈ ಕುರಿತು ಆಯವ್ಯಯದ ಮೊದಲನೇ ಸುತ್ತಿನ ಸಾರ್ವಜನಿಕ ಸಮಾಲೋಚನಾ ಸಭೆಯನ್ನು ಜ. 12ರಂದು ಮುಂಜಾನೆ 11.30 ಗಂಟೆಗೆ ಜಿಲ್ಲಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು ಗದಗ-ಬೆಟಗೇರಿ ನಗರಸಭೆ ಇವರ ಅಧ್ಯಕ್ಷತೆಯಲ್ಲಿ ನಗರಸಭಾ ಸಭಾಭವನದಲ್ಲಿ ಕರೆಯಲಾಗಿದ್ದು, ಸಭೆಗೆ ಆಗಮಿಸಿ ಅವಳಿ ನಗರದ ಸರ್ವತೋಮುಖ ಅಭಿವೃದ್ಧಿಗಾಗಿ ಅಮೂಲ್ಯ ಸಲಹೆ-ಸೂಚನೆಗಳನ್ನು ನೀಡಲು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕದ ದೀರ್ಘಾವಧಿ ಮುಖ್ಯಮಂತ್ರಿ ಎಂಬ ದಾಖಲೆ ಸಾಧ್ಯವಾಗಿದ್ದು ಜನರ ಆಶೀರ್ವಾದದಿಂದ

# ಮುಖ್ಯಮಂತ್ರಿಯಾಗಿ ದಿ.ದೇವರಾಜ್ ಅರಸು ಅವರ ದಾಖಲೆ ಮುರಿದಿದ್ದೇನೆ; ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ರಾಜ್ಯದ ಜನರು ಮತ್ತು ಹೈ ಕಮಾಂಡ್ ಆಶೀರ್ವಾದ, ಶಾಸಕರ ಬೆಂಬಲದಿಂದ ನಾನು ಎರಡನೇ ಬಾರಿ ಮುಖ್ಯಮಂತ್ರಿಯಾಗಿ ದಿವಂಗತ ದೇವರಾಜ ಅರಸು ಅವರ ದಾಖಲೆ ಮುರಿದಿದ್ದೇನೆ ಎಂದು ವಿಜಯಪುರದಲ್ಲಿ ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದರು.

ಅವರು ಶುಕ್ರವಾರ ವಿಜಯಪುರ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವಿಜಯಪುರ ಜಿಲ್ಲೆ ವತಿಯಿಂದ ವಿಜಯಪುರ ದ ವಿ. ಬಿ ಶಾಲಾ ಆವರಣದಲ್ಲಿ ಆಯೋಜಿಸಲಾಗಿದ್ದ ವಿಜಯಪುರ ಜಿಲ್ಲೆಯ ವಿವಿಧ ಯೋಜನೆಯ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಸಮಾರಂಭದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ನಂತರ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೇರೆವೇರಿಸಿ ಮಾತನಾಡಿದರು.

ದೇವರಾಜ ಅರಸು ಅವರ 7 ವರ್ಷ 239 ದಿನಗಳ ಸುದೀರ್ಘ ಅವಧಿಗೆ ಮುಖ್ಯಮಂತ್ರಿ ಆಗಿದ್ದ ದಾಖಲೆಯನ್ನು ಮುರಿದು ಕರ್ನಾಟಕದ ದೀರ್ಘಾವಧಿ ಮುಖ್ಯಮಂತ್ರಿ ಎಂಬ ದಾಖಲೆ ಮಾಡಲು ಸಾಧ್ಯವಾಗಿದ್ದು ಜನರ ಆಶೀರ್ವಾದದಿಂದ. ಅದಕ್ಕಾಗಿ ರಾಜ್ಯದ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೃತಜ್ಞತೆಗಳನ್ನು ಅರ್ಪಿಸಿದರು.

ವಿಜಯಪುರದ ಎಂಟು ವಿಧಾನ ಸಭಾ ಕ್ಷೇತ್ರಗಳಲ್ಲಿ ಆರು ಕ್ಷೇತ್ರಗಳನ್ನು ಗೆದ್ದಿದ್ದು, ಚುನಾವಣೆಯಲ್ಲಿ 135 ಕ್ಷೇತ್ರಗಳಲ್ಲಿ ಗೆಲ್ಲಬೇಕಾದರೆ ವಿಜಯಪುರ ಜನರ ಆಶೀರ್ವಾದ ಬಹಳ ಮುಖ್ಯ ಎಂದರು. 45 ವರ್ಷಗಳಿಂದ ಇಡೀ ರಾಜ್ಯ ಸುತ್ತಾಡಿದ್ದು, ವಿಜಯಪುರ ಜಿಲ್ಲೆಯ ಜನ ಆಶೀರ್ವಾದ ಮಾಡಿದ್ದಾರೆ ಎಂದರು.

ಬಸನಗೌಡ ಯತ್ನಾಳ್ ಅವರು ಅನೇಕ ಬೇಡಿಕೆಗಳನ್ನು ಇಟ್ಟಿದ್ದು, ಕನಕದಾಸ ವೃತ್ತದಿಂದ ಅಂಬೇಡ್ಕರ್ ಹಾಗೂ ಶಿವಾಜಿ ವೃತ್ತದವರೆಗೆ 160 ಕೋಟಿ ವೆಚ್ಚದ ಮೂರು ಕಿಮೀ ಮೇಲ್ಸೇತುವೆ ಮಾಡಬೇಕೆಂದು ಮನವಿ ಮಾಡಿದ್ದು ಅದನ್ನು ನೆರವೇರಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್, ಸಚಿವ ಶಿವಾನಂದ ಪಾಟೀಲ್, ಶಾಸಕ ಬಸನಗೌಡ ಯತ್ನಾಳ್ ಉಪಸ್ಥಿತರಿದ್ದರು



### ಮುಂದಿನ ದಿನಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ

ವಿಜಯಪುರದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆಯಾಗಬೇಕೆಂದು ಹಿಂದಿನ ಸರ್ಕಾರ ಪಿಪಿಪಿ ಮಾದರಿಯಲ್ಲಿ ಕೈಗೊಳ್ಳಬೇಕೆಂದು ಚಿಂತಿಸಿತ್ತು. ಮುಂದಿನ ದಿನಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಲಾಗುವುದು ಎಂದು ಭರವಸೆ ನೀಡಿದರು.

ರಾಜ್ಯದಲ್ಲಿ 71 ವೈದ್ಯಕೀಯ ಕಾಲೇಜುಗಳಿದ್ದು ಈ ಪೈಕಿ 22 ಸರ್ಕಾರಿ ವೈದ್ಯಕೀಯ ಕಾಲೇಜುಗಳಿವೆ. ಉಳಿದ ಜಿಲ್ಲೆಗಳಲ್ಲಿಯೂ ಟ್ರಾಮಾ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಸ್ಥಾಪಿಸಲಾಗುವುದು ಎಂದರು.

### 82 ಕೋಟಿ ವೆಚ್ಚದ ಕಾಮಗಾರಿಗಳ ಉದ್ಘಾಟನೆ ಹಾಗೂ 730 ಕೋಟಿಗೂ ಹೆಚ್ಚು ಮೊತ್ತದ ಕಾಮಗಾರಿಗಳ ಶಂಕುಸ್ಥಾಪನೆ

ವಿಜಯಪುರ ಜಿಲ್ಲೆಯಲ್ಲಿ 800 ಕ್ಕೂ ಹೆಚ್ಚು ಕೋಟಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. 82 ಕೋಟಿ ವೆಚ್ಚದ ಕಾಮಗಾರಿಗಳ ಉದ್ಘಾಟನೆ ಹಾಗೂ 730 ಕೋಟಿಗೂ ಹೆಚ್ಚು ಮೊತ್ತದ ಕಾಮಗಾರಿಗಳ ಶಂಕುಸ್ಥಾಪನೆ ಮಾಡಲಾಗಿದೆ. ರಾಣಿ ಚನ್ನಮ್ಮ ಪ್ರತಿಮೆ ಲೋಕಾರ್ಪಣೆ ಸೇರಿದಂತೆ ಕಿತ್ತೂರು ರಾಣಿ ಚೆನ್ನಮ್ಮ ಬಸ್ ನಿಲ್ದಾಣ ಎಂದು ನಾಮಕರಣ ಮಾಡಲಾಗಿದೆ. ದಕ್ಷಿಣ ಭಾರತದಲ್ಲಿಯೇ ಮೊದಲ ವೆಲೊಡ್ರೋಮ್*

ಈ ಭಾಗದಲ್ಲಿ ಸೈಕ್ಲಿಸ್ಟ್ ಗಳಿಗಾಗಿ , ದಕ್ಷಿಣ ಭಾರತದಲ್ಲಿಯೇ ಮೊದಲ ವೆಲೊಡ್ರೋಮ್ ನ್ನು ಸ್ಥಾಪಿಸಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

### ವೀರಶೈವ ಮಹಾಸಭೆ ಅಧ್ಯಕ್ಷರಾಗಿ ನ್ಯಾ. ಶಿವರಾಜ್ ಪಾಟೀಲ್ ಆಯ್ಕೆಗೆ ರಂಭಾಪುರಿ ಶ್ರೀ ಒತ್ತಾಯ

# ಪಾಟೀಲರ ಆಯ್ಕೆಗೆ ಅಪಸ್ವರ ಬಾರದು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಡಾ. ಶಾಮನೂರು ಶಿವಶಂಕರಪ್ಪನವರ ಅಗಲಿಕೆಯಿಂದ ತೆರವಾಗಿರುವ 120 ವರ್ಷಗಳ ಸುದೀರ್ಘ ಇತಿಹಾಸವಿರುವ ವೀರಶೈವ ಲಿಂಗಾಯತ ಸಮುದಾಯದ ಪ್ರಾತಿನಿಧಿಕ ಸಂಸ್ಥೆಯಾಗಿರುವ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ (ಅಭಾವೀಮ)ಯ ರಾಷ್ಟ್ರೀಯ ಅಧ್ಯಕ್ಷ ಸ್ಥಾನಕ್ಕೆ ಸುಪ್ರೀಂ ಕೋರ್ಟಿನ ನಿವೃತ್ತ ನ್ಯಾಯಮೂರ್ತಿ ಡಾ. ಶಿವರಾಜ್ ಪಾಟೀಲರನ್ನು ಆಯ್ಕೆ ಮಾಡುವಂತೆ ಶ್ರೀರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಒತ್ತಾಯಿಸಿದ್ದಾರೆ.

ಶೇಷಾದ್ರಿಪುರದಲ್ಲಿ ನಡೆದ ನ್ಯಾಯವಾದಿ ಪ್ರಕಾಶ್ ಅಂಗಡಿಯವರ ಸುಬ್ರಮಣ್ಯ ಶಕ್ತಿ ಟವರ್ ಉದ್ಘಾಟನೆ ಅಂಗವಾಗಿ ಹಮ್ಮಿಕೊಂಡಿದ್ದ ಸಾರ್ವಜನಿಕ ಇಷ್ಟಲಿಂಗ ಮಹಾಪೂಜೆ ಸಮಾರಂಭದ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.



ಹಾನಗಲ್ ಕುಮಾರ ಮಹಾಸ್ವಾಮಿಗಳು ಸಮುದಾಯದ ಒಗ್ಗಟ್ಟು ಮತ್ತು ಐಕ್ಯತೆಗಾಗಿ ಸಂಸ್ಥಾಪಿಸಿರುವ ಅ.ಭಾ.ವೀ ಮಹಾಸಭಾ ಅಧ್ಯಕ್ಷರಾಗಿದ್ದ ಡಾ. ಶಾಮನೂರು ಶಿವಶಂಕರಪ್ಪನವರು ನ್ಯಾಯ-ನಿಷ್ಠುರವಾಗಿ ತಮ್ಮ ವೈಯಕ್ತಿಕ ಹಿತಾಸಕ್ತಿಗಿಂತಲೂ ಸಮುದಾಯದ ಹಿತಕ್ಕಾಗಿ ಧ್ವನಿ ಎತ್ತುತ್ತಿದ್ದ ಓರ್ವ ಧೀಮಂತ ನಾಯಕರಾಗಿದ್ದರು. ಅವರಿಂದ ತೆರವಾದ ಸ್ಥಾನಕ್ಕೆ ಅವರಷ್ಟೇ ಸಮರ್ಥವಾಗಿ, ಎಲ್ಲ ಸಮುದಾಯದ ಪ್ರೀತಿ-ಗೌರವಗಳನ್ನು ಪಡೆದು, ಪೀಠಗಳ ಇತಿಹಾಸ, ಬಸವಾದಿ ಶರಣರ ವಿಚಾರಧಾರೆಗಳನ್ನು ಚೆನ್ನಾಗಿ ಅರಿತು ಎಲ್ಲರನ್ನೂ ಒಟ್ಟಿಗೆ ಕರೆದುಕೊಂಡು ಹೋಗುವ ಸಚ್ಚಾರಿತ್ರ್ಯದ ವ್ಯಕ್ತಿತ್ವವದವರ ಅವಶ್ಯಕತೆಯಿದೆ ಎಂದರು.

ರಾಜಕೀಯೇತರ ವ್ಯಕ್ತಿಗಳು ಮಹಾಸಭಾದ ಅಧ್ಯಕ್ಷರಾಗುವುದರಿಂದ ಸಮಾಜಕ್ಕೆ ಅನ್ಯಾಯವಾದಾಗ ಧ್ವನಿ ಎತ್ತಲು ಸಾಧ್ಯವಾಗುತ್ತದೆ. ಅಂತಹ ವ್ಯಕ್ತಿತ್ವ ಹೊಂದಿರುವ ನ್ಯಾ. ಶಿವರಾಜ ಪಾಟೀಲರನ್ನು ಅವಿರೋಧವಾಗಿ, ಸರ್ವಾನುಮತದಿಂದ ಆಯ್ಕೆ ಮಾಡುವುದರಿಂದ ಸಮಾಜದ ಸಂಘಟನೆಗೆ ದೊಡ್ಡ ಶಕ್ತಿ ಬರುತ್ತದೆ. ಕಾನೂನು ಮತ್ತು ಧರ್ಮ ಎರಡನ್ನೂ ಅರಿತಿರುವ ಪಾಟೀಲರ ಆಯ್ಕೆಗೆ ಯಾವುದೇ ಅಪಸ್ವರ ಬರುವದಿಲ್ಲ ಎಂಬ ವಿಶ್ವಾಸವನ್ನು ಜಗದ್ಗುರುಗಳು ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಕರ್ನಾಟಕ ಇತಿಹಾಸ ಅಕಾಡೆಮಿ ಹೊರತಂದಿರುವ 'ಇತಿಹಾಸ ದರ್ಶನ' ಕೃತಿ ಬಿಡುಗಡೆ ಮಾಡಿ ಸುಪ್ರೀಂ ಕೋರ್ಟ್ ವಿಶ್ರಾಂತ ನ್ಯಾಯಮೂರ್ತಿ ಡಾ. ಶಿವರಾಜ ಪಾಟೀಲ್ ಮಾತನಾಡಿ, ಪ್ರಾಮಾಣಿಕತೆ, ಪರಿಶ್ರಮ ಮತ್ತು ವಿಧೇಯತೆ ಇದ್ದಲ್ಲಿ ಭಗವಂತನ ಆಶೀರ್ವಾದ ಇರುತ್ತದೆ.

ನ್ಯಾಯವಾದಿಗಳಾಗಿ ಕೆಲಸ ನಿರ್ವಹಿಸುವವರು ಆರ್ಥಿಕ ದುರ್ಬಲರು, ಅನ್ಯಾಯಕ್ಕೆ ಒಳಗಾದ ಬಡವರಿಗೆ ನ್ಯಾಯ ಕೊಡಿಸುವ ಸಂದರ್ಭದಲ್ಲಿ ಮಾನವೀಯತೆಯಿಂದ ನಡೆದುಕೊಳ್ಳಬೇಕು. ಕಕ್ಷಿದಾರರು ನೀಡಿದ ಫೀ (ಶುಲ್ಕ) ಖಾಲಿಯಾಗಬಹುದು. ಆದರೆ ಅವರು ಮಾಡಿದ ಪ್ರೇ (ಪ್ರಾರ್ಥನೆ) ಕೊನೆವರೆಗೆ ನಮ್ಮೊಂದಿಗಿರುತ್ತದೆ. ಇಂತಹ ಸ್ವಭಾವವನ್ನು ಮೈಗೂಡಿಸಿಕೊಂಡಿರುವ ಪ್ರಕಾಶ್ ಅಂಗಡಿಯವರು ಜೀವನದಲ್ಲಿ ಇನ್ನೂ ಉನ್ನತ ಸ್ಥಾನವನ್ನು ತಲುಪಲಿದ್ದಾರೆ ಎಂದರು.

ಎಡೆಯೂರಿನ ಶ್ರೀರೇಣುಕ ಶಿವಾಚಾರ್ಯರು, ಚಿಕ್ಕಕಲ್ಲುಬಾಳು ಶ್ರೀಗಳು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ, ಪ್ರಕಾಶ್ ಅಂಗಡಿ ದಂಪತಿಗಳು ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಬಡ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರ ಅಂಗನವಾಡಿಗಳಲ್ಲಿ ಎಲ್‌ಕೆಜಿ-ಯುಕೆಜಿ ಪ್ರಾರಂಭಿಸುತ್ತಿರುವುದು ಬಡ ಮತ್ತು ಮಧ್ಯಮ ವರ್ಗದ ಮಕ್ಕಳಿಗೆ ಸಾಕಷ್ಟು ಅನಕೂಲವಾಗುತ್ತಿದೆ ಎಂದು ಪುರಸಭೆ ಮಾಜಿ ಅಧ್ಯಕ್ಷೆ ಪೂರ್ಣಿಮಾ ಪಾಟೀಲ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಅಂಗನವಾಡಿ ಕೇಂದ್ರ ಸಂಖ್ಯೆ 48ರಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ತರಗತಿ ಪ್ರಾರಂಭದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಪಾಲಕರು ಖಾಸಗಿ ಶಾಲೆಗಳತ್ತ ಚಿತ್ತ ಹರಿಸಿ ಆರ್ಥಿಕ ಸಂಕಷ್ಟದಲ್ಲಿ ಸಿಲುಕುತ್ತಿದ್ದಾರೆ ಮತ್ತು ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕುಸಿಯುತ್ತಿದೆ. ಬಡ ಮಕ್ಕಳಿಗೂ ಉತ್ತಮ ಗುಣಮಟ್ಟದ ಶಿಕ್ಷಣ ಕಲ್ಪಿಸುವುದು, ಸರ್ಕಾರಿ ಶಾಲೆಗಳ ಬಲವರ್ಧನೆಗಾಗಿ ಸರ್ಕಾರ ಕೈಗೊಂಡಿರುವ ಈ ಕ್ರಮ ಶ್ಲಾಘನೀಯ. ಆದರೆ ಈ ವ್ಯವಸ್ಥೆಯನ್ನು ಸರ್ಕಾರ ಜವಾಬ್ದಾರಿಯುತವಾಗಿ ನಿರ್ವಹಿಸಬೇಕು ಎಂದರು.

ಅಂಗನವಾಡಿ ಮೇಲ್ವಿಚಾರಕಿ ನಂದಾ ನವಲೆ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ. ಮಕ್ಕಳಿಗೆ ಓದಿನ ಜೊತೆಗೆ ಪೌಷ್ಠಿಕ ಆಹಾರ, ಆರೋಗ್ಯ ಚಿಕಿತ್ಸೆ, ಸೌಲಭ್ಯ, ಪಠ್ಯೇತರ ಚಟುವಟಿಕೆಗಳಿಗೆ ಈ ಕೇಂದ್ರ ಸಹಾಯಕವಾಗಲಿದೆ ಎಂದು ಹೇಳಿದರು.

ಸಮಾಜ ಸೇವಕ ಶಂಕರ ಬ್ಯಾಡಗಿ ಶಂಕರ ಬ್ಯಾಡಗಿ, ಪುರಸಭೆ ಮಾಜಿ ಅಧ್ಯಕ್ಷೆ ಜಯಕ್ಕ ಕಳ್ಳಿ ಮಕ್ಕಳಿಗೆ ನೋಟ್‌ಬುಕ್ ವಿತರಣೆ ಮಾಡಿ ಇಲಾಖೆಯ ಸಿಬ್ಬಂದಿಗಳನ್ನು ಸನ್ಮಾನಿಸಿದರು. ಶಿಶು ಅಭಿವೃದ್ಧಿ ಇಲಾಖೆಯ ಯೋಜನಾಧಿಕಾರಿ ಅನ್ನಪೂರ್ಣ ಹಳ್ಳಿಗುಡಿ, ಆರೋಗ್ಯ ಇಲಾಖೆಯ ಸುಧಾ ಕಂತ್ರೋಜಿ, ವಕೀಲ ಮಹೇಶ ಹಾರೋಗೇರಿ, ಬಿ.ಬಿ. ನೇಕಾರ ಸೇರಿದಂತೆ ಚಿಣ್ಣರು, ಪಾಲಕರು ಇದ್ದರು.

## ಜ.14ರಂದು ಲೋಕಾಯುಕ್ತ ಜನಸಂಪರ್ಕ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಂಗಳೂರಿನ ಲೋಕಾಯುಕ್ತ ಅಪರ ಪೊಲೀಸ್ ಮಹಾ ನಿರ್ದೇಶಕರು ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಜನವರಿ 14 ರ ಬುಧವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 01.00 ಗಂಟೆಯವರೆಗೆ "ಪುರಸಭೆ ಸಭಾ ಭವನ ನರಗುಂದದಲ್ಲಿ" ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಆಯೋಜನೆ ಮಾಡಿದ್ದಾರೆ. ಅಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರಾದ ವಿಜಯ ಬಿರಾದಾರ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಯಾವುದೇ ಸರಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದು ಎಂದು ಅವರು ಹೇಳಿದ್ದಾರೆ.

## ಜ.12ರಂದು ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ಜನವರಿ 21 ರಂದು ಆಚರಿಸಲಾಗುವ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ನಿಮಿತ್ತ ಜನವರಿ 12 ರಂದು ಸೋಮವಾರ ಬೆಳಿಗ್ಗೆ: 11 ಗಂಟೆಗೆ ಹಾಗೂ ಸವಿತಾ ಮಹರ್ಷಿ ಜಯಂತಿ ನಿಮಿತ್ತ ಜನವರಿ 12 ರಂದು ಸೋಮವಾರ ಮಧ್ಯಾಹ್ನ: 12 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವ್ಹಿ.ಬಳ್ಳಾರಿ ತಿಳಿಸಿದ್ದಾರೆ.

### ಎಸ್.ಎಸ್ ಕೂಡ್ಲಮಠ ಶಾಲೆಯಲ್ಲಿ ಉಚಿತ ಆರೋಗ್ಯ ಶಿಬಿರ | 800ಕ್ಕೂ ಹೆಚ್ಚು ಬಡ ರೋಗಿಗಳಿಗೆ ಚಿಕಿತ್ಸೆ, ಔಷಧೋಪಚಾರ

# ಎಲ್ಲ ಸಂಪತ್ತಿಗಿಂತ ಆರೋಗ್ಯ ಸಂಪತ್ತು ಮುಖ್ಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ತಮ್ಮ ಬದುಕನ್ನೇ ಸಮರ್ಪಿಸಿಕೊಂಡಿರುವ ಹೆತ್ತ ತಂದೆ-ತಾಯಿ, ವಿದ್ಯೆ ನೀಡಿದ ಗುರುಗಳು ದೇವರ ಸಮಾನ ಮತ್ತು ಸದಾ ಸ್ಮರಣೀಯರು ಎಂದು ಪ್ರಖ್ಯಾತ ಮೆದುಳು ಮತ್ತು ನರರೋಗ ಶಸ್ತ್ರ ಚಿಕಿತ್ಸಾ ತಜ್ಞರಾದ ಡಾ. ಎಸ್.ಪಿ. ಬಳಿಗಾರ ಹೇಳಿದರು.



ಅವರು ಶುಕ್ರವಾರ ತಾಲೂಕಿನ ಶಿಗ್ಲಿಯ ಗ್ರಾಮ ಭಾರತಿ ಶಿಕ್ಷಣ ಸಮಿತಿಯ ಎಸ್.ಎಸ್. ಕೂಡ್ಲಮಠ ಕನ್ನಡ ಆಂಗ್ಲ ಮಾಧ್ಯಮ ಪ್ರಾಥಮಿಕ-ಪ್ರೌಢಶಾಲೆ, ಶ್ರೀಮತಿ ಜಾನಕಿಬಾಯಿ ರಜಪೂತ ಕನ್ನಡ ಪ್ರಾಥಮಿಕ ಶಾಲೆ ಹಾಗೂ ಪುಟ್ಟಯ್ಯ ಸಂಗಯ್ಯ ಕೂಡ್ಲಮಠ ಶಿಕ್ಷಣ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳು ಮತ್ತು ವೈದ್ಯರುಗಳಿಂದ ಅಗಲಿದ ಶಿಕ್ಷಕರ ಸ್ಮರಣಾರ್ಥ ಎಸ್.ಎಸ್. ಕೂಡ್ಲಮಠ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಬೃಹತ್ ಉಚಿತ ಆರೋಗ್ಯ ಶಿಬಿರದಲ್ಲಿ ಪಾಲ್ಗೊಂಡು ಮಾತನಾಡಿದರು.

ನಾಲ್ಕೈದು ದಶಕಗಳ ಹಿಂದೆ ಗುರು-ಶಿಷ್ಯರ ಸಂಬಂಧ ಅತ್ಯಂತ ಶ್ರೇಷ್ಠವಾಗಿತ್ತು. ಶಿಕ್ಷಣ ಸೇವೆಗಾಗಿಯೇ ಬದುಕನ್ನು ಮೀಸಲಿರಿಸಿದ್ದ ಅವರು ಶಿಕ್ಷಣದ ಜತೆಗೆ ಮಕ್ಕಳಿಗೆ ಮಾನವೀಯ ಮೌಲ್ಯ, ಸಂಸ್ಕಾರ ನೀಡಿ ಪರಿಪೂರ್ಣ ಬದು-ಕಿಗೆ ಅಣಿಯಾಗಿಸುತ್ತಿದ್ದರು. ಮನುಷ್ಯನಿಗೆ ಎಲ್ಲ ಸಂಪತ್ತಿಗಿಂತ ಆರೋಗ್ಯ ಸಂಪತ್ತು ಮುಖ್ಯವಾಗಿದ್ದು, ನಿತ್ಯದ ಬದುಕಿನಲ್ಲಿ ದುಶ್ಚಟ, ದುರ್ಗುಣಗಳಿಂದ ದೂರವಿದ್ದು ಸತ್ಸಂಗ, ಸದ್ವಿಚಾರ, ಸಾತ್ವಿಕ ಆಹಾರ, ವ್ಯಾಯಾಮ ರೂಢಿಸಿಕೊಳ್ಳಬೇಕು. ಅಗಲಿದ ಶಿಕ್ಷಕರ ಸ್ಮರಣಾರ್ಥವಾಗಿ ಗ್ರಾಮೀಣ ಭಾಗದ ಬಡವರ ಆರೋಗ್ಯ ಸೇವೆಗೆ ಅವಕಾಶ ಕಲ್ಪಿಸಿರುವುದು ಸಂತಸ ತಂದಿದೆ ಎಂದರು.

ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಸ್.ಪಿ. ಬಳಿಗಾರ ಮಾತನಾಡಿ, ಎಸ್.ಎಸ್. ಕೂಡ್ಲಮಠ ಶಾಲೆಯಲ್ಲಿ ಕಲಿತ ಸಾವಿರಾರು ವಿದ್ಯಾರ್ಥಿಗಳು ಇಂದು ಎಲ್ಲ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುವ ಮೂಲಕ ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ ಎಂದರು.

ಈ ಶಾಲೆಯಲ್ಲಿ ಕಲಿತ ಹೃದಯರೋಗ ತಜ್ಞರಾದ ಡಾ. ರವಿ ಸಾಲ್ಮನಿ, ದಾವಣಗೆರೆ ಎಸ್.ಎಸ್. ಆಸ್ಪತ್ರೆಯ ಮಾಜಿ ನಿರ್ದೇಶಕರಾದ ಡಾ. ಎನ್.ಕೆ. ಕಾಳಪ್ಪನವರ, ತಜ್ಞ ವೈದ್ಯರಾದ ಪ್ರದೀಪ ಕಲ್ಲೊಳ್ಳಿಮಠ ಸೇರಿ ಸ್ಥಳೀಯ ವೈದ್ಯರುಗಳ ನೇತೃತ್ವದಲ್ಲಿ ಉಚಿತ ಆರೋಗ್ಯ ಶಿಬಿರ ನಡೆಯಿತು. ಶಿಗ್ಲಿ ಸೇರಿ ಸುತ್ತಲಿನ ಗ್ರಾಮಗಳ 800ಕ್ಕೂ ಹೆಚ್ಚು ರೋಗಿಗಳಿಗೆ ವೈದ್ಯಕೀಯ ತಪಾಸಣೆ, ಚಿಕಿತ್ಸೆ ಮತ್ತು ಔಷಧೋಪಚಾರ ನೀಡಲಾಯಿತು.

ಈ ವೇಳೆ ಶಿಕ್ಷಣ ಸಂಸ್ಥೆಯ ಎಫ್.ಡಿ. ಹುನಗುಂದ, ಜಿ.ಎಫ್. ಘಂಟಾಮಠ, ಸಿ.ಎಂ. ರಾಗಿ, ಎಚ್.ಎಫ್. ತಳವಾರ, ಬಿ.ಎಂ. ಕಳಸದ, ಎನ್.ಬಿ. ಪಾಟೀಲ, ವೀರಣ್ಣ ಪವಾಡದ, ಪ್ರವೀಣ ಕಾಳಪ್ಪನವರ, ಡಿ.ವೈ. ಹುನಗುಂದ, ಸೋಮಣ್ಣ ಡಾಣಗಲ್, ಸಿದ್ದಣ್ಣ ಯಲಿಗಾರ, ಸಿ.ಬಿ. ಮುಗಳಿ, ಎಲ್.ಪಿ. ಲಮಾಣಿ, ಪಿ.ಸಿ. ಹಿರೇಮಠ, ಎಸ್.ಎ. ಪಾಟೀಲ, ಎಸ್.ಎಸ್. ಕಳ್ಳಿಳ್ಳಿ ಮುಂತಾದವರಿದ್ದರು. ಆರ್.ಎಂ. ಜಂಬೇರಾಳ, ಬಿ.ಬಿ. ಚಿಟಗಿ, ಆರ್.ಎಂ. ಬಸಾಪುರ ನಿರೂಪಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಮನುಷ್ಯ ಸಮಾಜ ಜೀವಿಯಾಗಿದ್ದು, ಸಮಾಜಕ್ಕಾಗಿ ಸೇವೆ ಮಾಡುವ ಮನೋಗುಣ ಬೆಳೆಸಿಕೊಳ್ಳಬೇಕು. ಶಿಕ್ಷಣ, ಆರೋಗ್ಯ, ಕೃಷಿ, ರಾಜಕೀಯ ಯಾವುದೇ ಕ್ಷೇತ್ರದಲ್ಲಿ ಪ್ರಾವೀಣ್ಯತೆ ಹೊಂದಿದ ವಿದ್ಯಾರ್ಥಿಗಳು ತಾವು ಕಲಿತ ಶಾಲೆ, ಕಲಿಸಿದ ಗುರುಗಳು, ಹೆತ್ತವರ ಸ್ಮರಣೆಯ ನೆಪದಲ್ಲಿ ಸಮಾಜ ಸೇವೆ ಮಾಡುವುದು ಅವರಿಗೆ ಸಲ್ಲಿಸುವ ಗೌರವಾಗಿದೆ. ಆ ಮೂಲಕ ಬದುಕನ್ನು ಸಾರ್ಥಕಗೊಳಿಸೋಣ. ಶಿಕ್ಷಣ ಕ್ಷೇತ್ರಕ್ಕೆ ಜಿಲ್ಲೆಯಲ್ಲಿಯೇ ಶಿಗ್ಲಿ ಗ್ರಾಮದ ಕೊಡುಗೆ ಶ್ರೇಷ್ಠವಾಗಿದೆ ಎಂದರು.

### ನರೇಗಲ್ಲ ಕ್ಲಸ್ಟರ್ ಮಟ್ಟದ ಎಫ್.ಎಲ್.ಎನ್ ಕಲಿಕಾ ಹಬ್ಬ

# ಕಲಿಕಾ ಹಬ್ಬವು ವಿದ್ಯಾರ್ಥಿಗಳ ಆಸಕ್ತಿಯನ್ನು ಹೆಚ್ಚಿಸುತ್ತದೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕಲಿಕಾ ಹಬ್ಬವು ಸಂತಸ ಕಲಿಕೆಯ ಇನ್ನೊಂದು ರೂಪವಾಗಿದ್ದು, ಇಂದು ನಡೆಯುತ್ತಿರುವ ಕಲಿಕಾ ಹಬ್ಬದಲ್ಲಿ ಮಕ್ಕಳು ಅದೆಷ್ಟು ಸಂತಸದಿಂದ ಪಾಲ್ಗೊಂಡಿದ್ದಾರೆ ಎಂಬುದನ್ನು ನಾವೆಲ್ಲರೂ ಗಮನಿಸಬಹುದು. ಇಂತಹ ಹಬ್ಬಗಳ ಮೂಲಕ ಮಕ್ಕಳಲ್ಲಿ ಕಲಿಕಾ ಆಸಕ್ತಿಯನ್ನು ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದು ಗದಗ ಜಿಲ್ಲಾ ಕಾ.ನಿ.ಪ ಸಂಘದ ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ ಹೇಳಿದರು.



ಪಟ್ಟಣದ ಕೆಜಿಎಂಪಿಎಸ್ ಶಾಲೆಯಲ್ಲಿ ಶುಕ್ರವಾರ ನಡೆದ ನರೇಗಲ್ಲ ಕ್ಲಸ್ಟರ್ ಮಟ್ಟದ ಎಫ್.ಎಲ್.ಎನ್ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳನ್ನು ಪಠ್ಯ-ಪುಸ್ತಕಗಳ ಆಚೆಗೂ ವಿವಿಧ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿ ಕಲಿಕೆಯನ್ನು ಸಂತೋಷದಾಯಕವಾದ ಅನುಭವವನ್ನಾಗಿಸುವುದು ಈ ಕಲಿಕಾ ಹಬ್ಬದ ಮುಖ್ಯ ಉದ್ದೇಶ. ಇದು ಇಲ್ಲಿ ಈಡೇರಿದೆ ಎಂದು ಹೇಳಲು ಹೆಮ್ಮೆಯೆನಿಸುತ್ತಿದೆ. ಮಕ್ಕಳಲ್ಲಿನ ಸಾಮಾಜಿಕ ಕೌಶಲ್ಯಗಳು, ಸೃಜನಶೀಲತೆ, ಸಾಂಸ್ಕೃತಿಕ ಅರಿವು ಇತ್ಯಾದಿಗಳನ್ನು ಹೊರತೆಗೆಯುವದರೊಂದಿಗೆ ಮಕ್ಕಳಲ್ಲಿ ನೈತಿಕ ಮೌಲ್ಯ ಬೆಳೆಸುವ ಉತ್ತಮ ವಿಚಾರವೂ ಇದರಲ್ಲಿದೆ. ಇದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡಿ, ಜೀವನ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಎಂಸಿಎಸ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ತಿಮ್ಮರೆಡ್ಡಿ ಬಂಡಿವಡ್ಡರ ಮಾತನಾಡಿ, ಮಕ್ಕಳು ಹೇಳುವ ಕಥೆಗಳನ್ನು ಕೇಳುವುದು ಚಂದ, ಅವರು ಕುಣಿಯುವದನ್ನು ನೋಡುವುದು ಚಂದ, ಹಾಡುವುದನ್ನು ಕೇಳುವುದು ಚಂದ. ಗಣಿತದ ಆಟ, ನಾಟಕದ ಕಲೆ, ಚಿತ್ರಕಲೆ ಇನ್ನಿತರ ಚಟುವಟಿಕೆಗಳು ಅವರಲ್ಲಿ ಕಲಿಕೆಯ ಆಸಕ್ತಿಯನ್ನು ಹೆಚ್ಚಿಸುತ್ತವೆ. ಇಂತಹ ಕಾರ್ಯಕ್ರಮಗಳು ಮಕ್ಕಳ ಮನೋವಿಕಾಸಕ್ಕೂ ಕಾರಣವಾಗುತ್ತವೆ ಎಂದರು.

ಸಿಆರ್‌ಪಿ ಜ್ಯೋತಿ ಬೇಲೇರಿ ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕ ಬಿ.ಬಿ. ಕುರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ ಜೆ.ಎ. ಪಾಟೀಲ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ನರೇಗಲ್ಲ ಕ್ಲಸ್ಟರ್‌ನ ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಅಧ್ಯಕ್ಷತೆ ವಹಿಸಿದ್ದ ಕೆಜಿಎಂಪಿಎಸ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಮಾತನಾಡಿ, ನಮ್ಮ ಶಾಲೆಯಲ್ಲಿ ಈ ಕಲಿಕಾ ಹಬ್ಬವನ್ನು ನಡೆಸುವ ಅವಕಾಶ ನಮಗೆ ದೊರೆತಿರುವುದು ನಮ್ಮ ಸೌಭಾಗ್ಯ. ಬೇರೆ ಬೇರೆ ಶಾಲೆಯ ಮಕ್ಕಳು ಏನೆಲ್ಲ ಚಟುವಟಿಕೆಗಳಲ್ಲಿ ತೊಡಗಿದ್ದಾರೆ, ಅವರ ಕ್ರಿಯಾಶೀಲತೆ ಹೇಗಿದೆ, ಇದರಿಂದ ನಮ್ಮ ಮಕ್ಕಳೇನು ಕಲಿಯಬಹುದು ಎಂಬುದನ್ನು ತಿಳಿದುಕೊಳ್ಳಲು ಈ ಕಲಿಕಾ ಹಬ್ಬ ಸಹಾಯಕವಾಗಿದೆ ಎಂದರು.

# ಕಾ.ನಿ.ಪ ಅಧ್ಯಕ್ಷರ ಅವಿರೋಧ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘ ಮುಳಗುಂದ ಘಟಕದ 2025/28ನೇ ಸಾಲಿನ ಜರುಗಿದ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ಮಹೇಶ ಛಬ್ಬಿ ಅವಿರೋಧವಾಗಿ ಆಯ್ಕೆಯಾದರು.

ಉಪಾಧ್ಯಕ್ಷರಾಗಿ ಬಿ.ಎಲ್. ಜಾಧಾವ, ಕಾರ್ಯದರ್ಶಿ ಚಂದ್ರಶೇಖರ ಭಜಂತ್ರಿ, ಖಜಾಂಚಿಯಾಗಿ ವಿ.ಡಿ. ಸಿದ್ದನಗೌಡರ, ಕಾರ್ಯಕಾರಿಣಿ ಸಮಿತಿಗೆ ಮಹೇಶ ನೀಲಗುಂದ, ಎಂ.ಎಂ. ಜಮಾಲಸಾಬನವರ, ರಾಜು ಪಾಟೀಲ ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ವಿ.ಡಿ. ಕಣವಿ ಘೋಷಿಸಿದರು.

# ವಾರ್ಷಿಕ ಸ್ನೇಹ ಸಮ್ಮೇಳನ ಇಂದು

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಸಿ.ಬಿ. ಬಡ್ನಿ ಆಂಗ್ಲ ಮಾಧ್ಯಮ ಶಾಲೆಯ 10ನೇ ವಾರ್ಷಿಕ ಸ್ನೇಹ ಸಮ್ಮೇಳನ ಜ. 10ರಂದು ಸಾಯಂಕಾಲ 4 ಗಂಟೆಗೆ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಜರುಗಲಿದೆ.

ಸಾನ್ನಿಧ್ಯವನ್ನು ಧಾರವಾಡ ಮುರುಘಾಮಠ, ಮುಳಗುಂದ ಗವಿಮಠದ ಡಾ. ಮಲ್ಲಿಕಾರ್ಜುನ ಮಹಾಸ್ವಾಮೀಜಿ ವಹಿಸಿಕೊಳ್ಳುವರು.

ಮುಖ್ಯ ಅತಿಥಿಗಳಾಗಿ ನಿವೃತ್ತ ಆರ್‌ಟಿಓ ಬಿ.ಡಿ. ಹರ್ತಿ, ಅಧ್ಯಕ್ಷತೆಯನ್ನು ಬಾಲಲೀಲಾ ಮಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ ವಹಿಸುವರು ಎಂದು ಪ್ರಧಾನ ಗುರುಮಾತೆ ಫಾತೀಮಾ ಖವಾಸ ತಿಳಿಸಿದ್ದಾರೆ.

### ಕಾಡ್ಗಿಚ್ಚು ತಡೆಗಟ್ಟಲು ಅರಣ್ಯಾಧಿಕಾರಿಗಳ ವಿಭಿನ್ನ ಪ್ರಯತ್ನಕ್ಕೆ ಪ್ರಶಂಸೆ

# ಇಲ್ಲಿ ಕುರಿಗಾಯಿಗಳೇ ಗುಡ್ಡದ ರಕ್ಷಕರು!

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದು ಕರೆಯಲ್ಪಡುವ ಕಪ್ಪತಗುಡ್ಡವನ್ನು ಬೇಸಿಗೆಯ ಕಾಡ್ಗಿಚ್ಚಿನಿಂದ ರಕ್ಷಿಸಲು ಗದಗ ಅರಣ್ಯ ಇಲಾಖೆ ವಿನೂತನ ಕ್ರಮವನ್ನು ಕೈಗೊಂಡಿದೆ. ಬೆಟ್ಟಕ್ಕೆ ಬೆಂಕಿ ಹಚ್ಚುವವರನ್ನು ತಡೆಯಬೇಕು ಎನ್ನುವ ದೂರದೃಷ್ಟಿಯಿಂದ ಕಾಡಿನ ಒಡನಾಡಿಗಳಾದ ಕುರಿಗಾಯಿಗಳನ್ನು ಬೆಟ್ಟದ ರಕ್ಷಕರನ್ನಾಗಿ ಪರಿವರ್ತಿಸಲು ವಿಶೇಷ ಜಾಗೃತಿ ಅಭಿಯಾನವನ್ನು ಪ್ರಾರಂಭಿಸಲಾಗಿದೆ.



ಕಪ್ಪತಗುಡ್ಡದ ಹುಲ್ಲು ಅಥವಾ ಭೂಮಿ ಸುಟ್ಟುಹೋದರೆ, ಆ ವರ್ಷ ಮಳೆ ಮತ್ತು ಬೆಳೆಗಳು ಸಮೃದ್ಧವಾಗಿರುತ್ತವೆ ಎಂಬ ಬಲವಾದ ಮೂಢನಂಬಿಕೆ ಈ ಪ್ರದೇಶದ ಜನರಲ್ಲಿದೆ. ಈ ಕಾರಣಕ್ಕಾಗಿ ಕೆಲವರು ಉದ್ದೇಶಪೂರ್ವಕವಾಗಿ ಬೆಟ್ಟಕ್ಕೆ ಬೆಂಕಿ ಹಚ್ಚುತ್ತಾರೆ. ಇಲಾಖೆಯು ಬೆಂಕಿ ತಡೆಗಾಗಿ ಕುರಿಗಾಯಿಗಳ ವಿಶ್ವಾಸ ಗಳಿಸಲು ಉಪಯುಕ್ತ ವಸ್ತುಗಳನ್ನು ಒಳಗೊಂಡಿರುವ ವಿಶೇಷ ಕಿಟ್‌ಗಳನ್ನು ಒದಗಿಸುತ್ತಿದೆ.

ಈ ಕಿಟ್‌ಗಳಲ್ಲಿ ಗಟ್ಟಿಮುಟ್ಟಾದ ಬೆನ್ನುಹೊರೆ, ಉಕ್ಕಿನ ನೀರಿನ ಬಾಟಲಿ, ರಾತ್ರಿಯಲ್ಲಿ ಬಳಸಲು ಗುಣಮಟ್ಟದ ಬ್ಯಾಟರಿ ಮತ್ತು ಕಪ್ಪತಗುಡ್ಡದ ಮಹತ್ವವನ್ನು ಎತ್ತಿ ತೋರಿಸುವ ಕರಪತ್ರಗಳು ಸೇರಿವೆ. ಇವುಗಳನ್ನು ಉಚಿತವಾಗಿ ವಿತರಿಸಲಾಗಿದೆ.

ಅರಣ್ಯ ಇಲಾಖೆಯಿಂದ ಕಳೆದ ವರ್ಷ, ಕುರಿಕಾಯಿಗಳ ಗುಡಿಸಲುಗಳಿಗೆ ಭೇಟಿ ನೀಡುವ ಮೂಲಕ ಕಪ್ಪತಗುಡ್ಡದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಆದರೆ ಈ ಬಾರಿ, ನಾವು ಪ್ರತಿಯೊಬ್ಬ ಕುರಿಗಾಯಿಯವರನ್ನು ವೈಯಕ್ತಿಕವಾಗಿ ತಲುಪುತ್ತಿದ್ದೇವೆ ಮತ್ತು ಅವರಿಗೆ ಮನವರಿಕೆ ಮಾಡಿಕೊಡುತ್ತಿರುವ ಕಾರಣ ನಮಗೆ ಕುರಿಗಾಯಿಗಳಿಂದ ಅತ್ಯುತ್ತಮ ಪ್ರತಿಕ್ರಿಯೆ ಸಿಗುತ್ತಿದೆ. ಈ ಬಾರಿ 31 ಹಳ್ಳಿಗಳ ಕುರಿಗಾಯಿಗಳ ಹಟ್ಟಿಗೆ ತೆರಳಿ 700 ಕಿಟ್‌ಗಳನ್ನು ನೀಡಲಾಗಿದೆ ಎನ್ನುತ್ತಾರೆ ಮುಂಡರಗಿ ವಿಭಾಗದ ಆರ್‌ಎಫ್‌ಒ ಮಂಜುನಾಥ ರಾಮಣ್ಣ ಮೇಗಲಮನಿ.



ಕಪ್ಪತಗುಡ್ಡ ಸುತ್ತಮುತ್ತ ಇಲಾಖೆಯು ಕುರುಬರನ್ನು ಮಾತ್ರವಲ್ಲದೆ ಕಪ್ಪತಗುಡ್ಡದ ಸುತ್ತಮುತ್ತಲಿನ ಹಳ್ಳಿಗಳ ಯುವಕರನ್ನು ಆಕರ್ಷಿಸಲು ಮುಕ್ತ ವಾಲಿಬಾಲ್ ಪಂದ್ಯಾವಳಿಯನ್ನು ಸಹ ಆಯೋಜಿಸಿತ್ತು. 28 ಹಳ್ಳಿಗಳಿಂದ 600ಕ್ಕೂ ಹೆಚ್ಚು ಕ್ರೀಡಾಪಟುಗಳು ಇದರಲ್ಲಿ ಭಾಗವಹಿಸಿದ್ದರು.

ಕಪ್ಪತಗುಡ್ಡದ ಮಡಿಲಿನಲ್ಲಿರುವ ಹಳ್ಳಿಗಳ ಸಮಾಜ ಸೇವೆ, ಜಾನಪದ ಕಲಾವಿದರನ್ನು, ರೈತ ಸಾಧಕರನ್ನು ಹೀಗೆ ವಿವಿಧ ರಂಗದಲ್ಲಿ ಸಾಧನೆ ಮಾಡಿದ 200ಕ್ಕೂ ಹೆಚ್ಚು ಸಾಧಕರನ್ನು ಗುರುತಿಸಿ ಗೌರವಿಸುವ ಮೂಲಕ ಕಪ್ಪತಗುಡ್ಡದ ರಕ್ಷಣೆಗಾಗಿ ಇಡೀ ಸಮುದಾಯವನ್ನು ಒಗ್ಗೂಡಿಸುವ ಪ್ರಯತ್ನ ಮಾಡಲು ಶ್ರಮಿಸಿರುವ ಆರ್‌ಎಫ್‌ಒ ಮಂಜುನಾಥ ರಾಮಣ್ಣ ಮೇಗಲಮನಿ ಮತ್ತು ಮುಂಡರಗಿ ಭಾಗದ ಅರಣ್ಯ ಇಲಾಖೆಯ ಸಿಬ್ಬಂದಿಗಳಾದ ಮೇಲಾರಪ್ಪ ಮಡಿವಾಳರ, ಶರಣಪ್ಪ ನೀರಲಗಿ, ಸೋಮನಗೌಡ ಪಾಟೀಲ, ರಾಮಪ್ಪ ಕಿಚಡಿ, ಸಂತೋಷ ಕಗದಾಳ, ಮೌಲಾಸಾಬ ಬನ್ನಿಕೊಪ್ಪ, ರಾಘವೇಂದ್ರ ಹೊಸಮನಿ, ರಾಹುಲ ಬಮ್ಮನಪಾಡ, ಈಶ್ವರ ಮರತೂರ, ಬಸವರಾಜ ಬಾಲವ್ವಗೊಳ, ಐಯ್ಯನಗೌಡರ, ಗಂಗಮ್ಮ ಪೂಜಾರ, ಮಂಜುನಾಥ ದೊಡ್ಡವಾಡ, ಕೃಷ್ಣಾ ಘಮ್ಮಾರ, ಬಸುರಾಜ ಕುರಬರ, ನೂರಹಮ್ಮದ ಲೈನ ಇವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

> ಹಿರಿಯ ಅಧಿಕಾರಿಗಳ ಸಲಹೆ-ಸೂಚನೆಯ ಮೇರೆಗೆ ಮುಂಡರಗಿ ಭಾಗದ ಸಾಧಕರನ್ನು ಸನ್ಮಾನಿಸಲಾಯಿತು. ಯುವಕರು ಪರಿಸರ ಪ್ರಿಯರಾಗಬೇಕು ಎನ್ನುವ ಹಿನ್ನೆಲೆ ವಾಲಿಬಾಲ್ ಪಂದ್ಯಾವಳಿ ಆಯೋಜನೆ ಮತ್ತು ಕಪ್ಪತ್ತಗುಡ್ಡ ಬೆಂಕಿ ತಡೆಗಾಗಿ ಕುರಿಗಾಯಿಗಳಿಗೆ ವಿಶೇಷ ಕಿಟ್ ವಿತರಿಸಲಾಯಿತು. ಈ ಕಾರ್ಯಕ್ರಮ ಯಶಸ್ವಿಯಾಗಲು ಈ ಭಾಗದ ಜನಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು, ಅರಣ್ಯ ಇಲಾಖೆಯ ಸಿಬ್ಬಂದಿ ವರ್ಗ, ಪರಿಸರವಾದಿಗಳ ಸಹಕಾರದಿಂದ ಸಾಧ್ಯವಾಗಿದೆ.
>
> **– ಮಂಜುನಾಥ ಮೇಗಲಮನಿ.**
> ಅರಣ್ಯ ವಲಯಾಧಿಕಾರಿ, ಮುಂಡರಗಿ.

### ಮಾತೆ ಫಾತೀಮಾ ಶೇಖ್ ಅವರ 195ನೇ ಜಯಂತಿ ಕಾರ್ಯಕ್ರಮ

# ಭಾರತದ ಮೊದಲ ಮುಸ್ಲಿಂ ಶಿಕ್ಷಕಿ ಫಾತೀಮಾ ಶೇಖ್



**■ವಿಜಯಸಾಕ್ಷಿ ಸುದ್ದಿ, ಗದಗ**

ಫಾತಿಮಾ ಶೇಖ್ 19ನೇ ಶತಮಾನದಲ್ಲಿ ಮಹಿಳೆಯರ ಶಿಕ್ಷಣಕ್ಕಾಗಿ ಹೋರಾಡಿದ ಪ್ರವರ್ತಕರು ಮತ್ತು ಸಮಾಜ ಸುಧಾರಕರು. ಫುಲೆ ದಂಪತಿಗಳೊಂದಿಗೆ ಸೇರಿ ದೇಶದ ಮೊದಲ ಬಾಲಕಿಯರ ಶಾಲೆಗಳನ್ನು ಸ್ಥಾಪಿಸಿದರು.

ಅಕ್ಷರದವ್ವ ಸಾವಿತ್ರಿಬಾ ಫುಲೆ ಅವರ ಜೊತೆಗೆ ಸೇರಿ ಶಿಕ್ಷಣದ ಕ್ರಾಂತಿಯನ್ನು ನಡೆಸಿ ಅಕ್ಷರದ ಬೆಳಕಿಗಾಗಿ ಹೋರಾಡಿದ ಫಾತೀಮಾ ಶೇಖ್ ಅವರು ಭಾರತದ ಮೊದಲು ಮುಸ್ಲಿಂ ಶಿಕ್ಷಕಿಯಾಗಿದ್ದಾರೆ ಎಂದು ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ್ ಹೇಳಿದರು.

ಅವರು ನಗರದ ರಾಜೋಟೇಶ್ವರ ನಗರ ಸ್ಲಂ ಪ್ರದೇಶದಲ್ಲಿ ಹಮ್ಮಿಕೊಂಡಿದ್ದ ಮಾತೆ ಫಾತಿಮಾ ಶೇಖ್ ಅವರ 195ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಸಮಾಜದಲ್ಲಿ ಅಜ್ಞಾನ, ಅಂಧಕಾರ, ಮೂಢನಂಬಿಕೆ ತುಂಬಿ ತುಳುಕುತ್ತಿದ್ದ ಕಾಲದಲ್ಲಿ ಸಂಪ್ರದಾಯಗಳನ್ನು ಮೆಟ್ಟಿ ನಿಂತ ದಿಟ್ಟೆ ಫಾತೀಮಾ ಶೇಖ್ ವಂಚಿತ ಸಮುದಾಯಗಳ ಶಿಕ್ಷಣಕ್ಕಾಗಿ ನಿರಂತರ ಹೋರಾಟ ನಡೆಸಿದ್ದಾರೆ. ಮಾತೆ ಸಾವಿತ್ರಿಬಾ ಫುಲೆ ಹಾಗೂ ಫಾತೀಮಾ ಶೇಖ್ ಅವರ ಶೈಕ್ಷಣಿಕ ಕ್ರಾಂತಿಯನ್ನು ನಾವು ಅರಿತುಕೊಂಡು ಇವರ ಹೋರಾಟದ ಹೆಜ್ಜೆಗಳಲ್ಲಿ ನಮ್ಮ ಮಹಿಳಾ ಸಮಿತಿಯನ್ನು ನಡೆಸಬೇಕು ಎಂದು ತಿಳಿಸಿದರು.

ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಈ ಸಂದರ್ಭದಲ್ಲಿ ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೆಹರುನಿಸಾ ಢಾಲಾಯತ, ಮಲೇಶಪ್ಪ ಕಲಾಲ, ಮೆಹಬೂಬಸಾಬ ಬಳ್ಳಾರಿ, ಖಾಜಾಸಾಬ ಇಸ್ಮಾಯಿಲನವರ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಕೊಪ್ಪಣ ಕಲಾಲ, ಸಿಕಂದರ ಪಾಪಣ್ಣನವರ, ಸಲೀಂ ಹರಿಹರ, ಶಂಕ್ರಪ್ಪ ಹದ್ಲಿ, ಸಾಕ್ರುಬಾಯಿ ಗೋಸಾವಿ, ಮೈಮುನ ಬೈರಕದಾರ ಮುಂತಾದವರು ಉಪಸ್ಥಿತರಿದ್ದರು.

ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಮಾತೆ ಸಾವಿತ್ರಿಬಾ ಫುಲೆ ಹಾಗೂ ಫಾತೀಮಾ ಶೇಖ್ ಅವರು 19ನೇ ಶತಮಾನದಲ್ಲಿಯೇ ಸಮಾಜದಲ್ಲಿ ಅಕ್ಷರ ಕ್ರಾಂತಿಗೆ ಮುನ್ನುಡಿ ಬರೆದವರು. ಹಲವಾರು ವಿರೋಧಗಳನ್ನು ಎದುರಿಸಿದವರು. ಚರಿತ್ರೆಯಲ್ಲಿ ಮರೆಯಾದ ಫಾತೀಮಾ ಶೇಖ್ ಅವರ ಬಗ್ಗೆ ಅರಿತುಕೊಳ್ಳುವುದು ಮತ್ತು ಶೋಧಿಸುವುದು ಇವತ್ತಿನ ಸಂದರ್ಭದಲ್ಲಿ ಅಗತ್ಯವಾಗಿದೆ ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka